ಸಂಪುಟ: 11 ಸಂಚಿಕೆ: 155 ಪುಟ: 4+2 ಬೆಲೆ : 3.00 ಗುರುವಾರ ಜುಲೈ 23, 2026 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್ ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 11 Issue : 155 Pages : 4+2 Rate : 3.00 Thursday July 23, 2026 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2020-22

ವಿಜಯ ಸಾಕ್ಷಿ ದಿನಪತ್ರಿಕೆ ಈಗ ಆನ್ ಲೈನ್ ನಲ್ಲಿಯೂ ಲಭ್ಯ. ನಿಮ್ಮ ನೆಚ್ಚಿನ ಪತ್ರಿಕೆಯನ್ನು ಓದಲು www.epaper.Vijayasakshi.com ಜಾಲತಾಣಕ್ಕೆ ಭೇಟಿ ನೀಡಿ. ಕ್ಷಣ ಕ್ಷಣದ ಸುದ್ದಿಗಳಿಗಾಗಿ www.Vijayasakshi.com ವೀಕ್ಷಿಸಿ.

## ಸೋರಿಕೆ ಪ್ರಕರಣವನ್ನು ರಾಜಕೀಯ ಅಸ್ತ್ರವನ್ನಾಗಿ ಮಾಡಲಾಗಿದೆ ಎಂದು ಸಿ.ಸಿ. ಪಾಟೀಲ ಆರೋಪ

# ನೀಟ್ ಹೆಸರಲ್ಲಿ ಕಾಂಗ್ರೆಸ್ ರಾಜಕೀಯ




**ವಿಜಯಸಾಕ್ಷಿ ಸುದ್ದಿ, ಗದಗ**

ನೀಟ್ ಪ್ರಶ್ನೆಪತ್ರಿಕೆ ಸೋರಿಕೆ ಪ್ರಕರಣವನ್ನು ಮುಂದಿಟ್ಟುಕೊಂಡು ಕಾಂಗ್ರೆಸ್ ಅನಗತ್ಯ ರಾಜಕೀಯ ಮಾಡುತ್ತಿದ್ದು, ವಿದ್ಯಾರ್ಥಿಗಳ ಭಾವನೆಗಳನ್ನು ದುರ್ಬಳಕೆ ಮಾಡಿಕೊಳ್ಳುವ ಪ್ರಯತ್ನ ನಡೆಸುತ್ತಿದೆ ಎಂದು ನರಗುಂದ ಶಾಸಕ ಸಿ.ಸಿ. ಪಾಟೀಲ ಆರೋಪಿಸಿದರು.

ಬುಧವಾರ ಪತ್ರಿಕಾ ಭವನದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ನೀಟ್ ಪ್ರಶ್ನೆಪತ್ರಿಕೆ ಸೋರಿಕೆ ಪ್ರಕರಣವನ್ನು ಪ್ರಧಾನಿ ನರೇಂದ್ರ ಮೋದಿ ಈಗಾಗಲೇ ಖಂಡಿಸಿದ್ದು, ತಪ್ಪಿತಸ್ಥರ ವಿರುದ್ಧ ಕಠಿಣ ಕ್ರಮ ಕೈಗೊಳ್ಳುವುದಾಗಿ ಸ್ಪಷ್ಟಪಡಿಸಿದ್ದಾರೆ. ಆದರೂ ಕಾಂಗ್ರೆಸ್ ಈ ವಿಷಯವನ್ನು ರಾಜಕೀಯ ಲಾಭಕ್ಕಾಗಿ ಬಳಸಿಕೊಳ್ಳುತ್ತಿದ್ದು, ಇದರಿಂದ ಪಕ್ಷ ಅಂತಾರಾಷ್ಟ್ರೀಯ ಮಟ್ಟದಲ್ಲಿ ಅಪಹಾಸ್ಯಕ್ಕೀಡಾಗಿದೆ ಎಂದು ಟೀಕಿಸಿದರು.

ರಾಹುಲ್ ಗಾಂಧಿ ನೇತೃತ್ವದಲ್ಲಿ ನಡೆದ ಪ್ರತಿಭಟನೆಯಲ್ಲಿ ದೇಶದ ವಿವಿಧ ಭಾಗಗಳಿಂದ ಬಂದ ಗೂಂಡಾಗಳು ಭಾಗವಹಿಸಿದ್ದರು ಎಂದು ಆರೋಪಿಸಿದ ಅವರು, ಪ್ರತಿಭಟನೆಯ ವೇಳೆ ಸಾಮಾಜಿಕ ಜಾಲತಾಣಗಳಲ್ಲಿ ಪ್ರಧಾನಿಯವರ ವಿರುದ್ಧ ಪ್ರಚೋದನಕಾರಿ ಸಂದೇಶಗಳು ಹರಿದಾಡಿದ್ದು, ಹಿಂಸಾತ್ಮಕ ಘೋಷಣೆಗಳನ್ನೂ ಕೂಗಲಾಗಿದೆ ಎಂದು ಹೇಳಿದರು. ಪ್ರಧಾನಿಯವರನ್ನು ಗೃಹಬಂಧನದಲ್ಲಿಡುವಂತೆ ಹೇಳಿರುವುದು ಪ್ರಜಾಪ್ರಭುತ್ವ ವಿರೋಧಿ ಮನೋಭಾವವನ್ನು ತೋರಿಸುತ್ತದೆ ಎಂದು ಆರೋಪಿಸಿದರು.

ಕಾಂಗ್ರೆಸ್ ಮುಖಂಡರು ಆರ್‌ಎಸ್‌ಎಸ್ ಸಭೆಗಳ ಸಂದರ್ಭ ಗಲಾಟೆಗಳು ನಡೆಯುತ್ತವೆ ಎಂದು ಆರೋಪಿಸುತ್ತಾರೆ. ಆದರೆ, ರಾಹುಲ್ ಗಾಂಧಿ ವಿದೇಶ ಪ್ರವಾಸ ಮುಗಿಸಿಕೊಂಡು ಬಂದಾಗಲೆಲ್ಲ ದೇಶದಲ್ಲಿ ಅಶಾಂತಿ ಸೃಷ್ಟಿಸುವ ಪ್ರಯತ್ನಗಳು ನಡೆಯುತ್ತವೆ ಎಂದು ಗಂಭೀರ ಆರೋಪ ಮಾಡಿದರು.

ದೇಶದಲ್ಲಿ ನಡೆದಿರುವ ಬೆಳವಣಿಗೆಗಳು ತನಿಖೆಯಲ್ಲಿ ರಾಷ್ಟ್ರದ್ರೋಹವೆಂದು ಸಾಬೀತಾದರೆ ಕಾಂಗ್ರೆಸ್ ನಾಯಕರು ನೈತಿಕ ಹೊಣೆ ಹೊತ್ತು ರಾಜೀನಾಮೆ ನೀಡುತ್ತಾರೆಯೇ ಎಂದು ಪ್ರಶ್ನಿಸಿದ ಅವರು, ತನಿಖಾ ವರದಿ ಬಂದ ಬಳಿಕ ಸತ್ಯಾಸತ್ಯತೆ ಹೊರಬರಲಿದೆ ಎಂದರು.

ಟಿಕಾಕ್ರೋಚ್ ಪಾರ್ಟಿಯ ಅಭಿಜಿತ್ ದೀಪ್ಕೆ ಕೆಲವೇ ದಿನಗಳ ಹಿಂದೆ ಅಮೆರಿಕದಿಂದ ಭಾರತಕ್ಕೆ ಬಂದಿದ್ದು, ಕೇಂದ್ರ ಸಚಿವ ಧರ್ಮೇಂದ್ರ ಪ್ರಧಾನ ಅವರೊಂದಿಗೆ ನಿಕಟ ಸಂಪರ್ಕ ಹೊಂದಿದ್ದರು. ವೈಯಕ್ತಿಕ ಕಾರಣಗಳಿಂದ ಈಗ ಅವರ ವಿರುದ್ಧವೇ ಮಾತನಾಡುತ್ತಿದ್ದಾರೆ ಎಂದು ಆರೋಪಿಸಿದರು.

ನರೇಂದ್ರ ಮೋದಿ ನೇತೃತ್ವದ ಸರ್ಕಾರ ಅಧಿಕಾರಕ್ಕೆ ಬಂದ ಬಳಿಕ ವೈದ್ಯಕೀಯ ಶಿಕ್ಷಣ ಕ್ಷೇತ್ರದಲ್ಲಿ ಮಹತ್ವದ ವಿಸ್ತರಣೆ ನಡೆದಿದೆ. ಕಳೆದ 10 ವರ್ಷಗಳಲ್ಲಿ 80 ಸಾವಿರ ಎಂಬಿಬಿಎಸ್ ಹಾಗೂ 70 ಸಾವಿರ ಸ್ನಾತಕೋತ್ತರ ವೈದ್ಯಕೀಯ ಸೀಟುಗಳು ಹೆಚ್ಚಳವಾಗಿದ್ದು, 390 ವೈದ್ಯಕೀಯ ಕಾಲೇಜುಗಳು ಆರಂಭವಾಗಿವೆ ಎಂದು ತಿಳಿಸಿದರು.

ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರ ಮಾತನಾಡಿ, ಸನಾತನ ಧರ್ಮ ಮತ್ತು ದೇಶದ ವಿರುದ್ಧ ಕೆಲವರು ನಿರಂತರವಾಗಿ ಮಾತನಾಡುತ್ತಿದ್ದಾರೆ. ನೀಟ್ ಪ್ರಶ್ನೆಪತ್ರಿಕೆ ಸೋರಿಕೆ ಪ್ರಕರಣದಿಂದ ನಮಗೂ ನೋವಾಗಿದೆ. ಆದರೆ, ಒಂದು ಪರೀಕ್ಷಾ ಕೇಂದ್ರದಲ್ಲಿ ನಡೆದ ಘಟನೆಯನ್ನು ದೇಶವ್ಯಾಪಿ ರಾಜಕೀಯ ವಿಷಯವನ್ನಾಗಿ ಮಾಡಲಾಗುತ್ತಿದೆ ಎಂದು ಆರೋಪಿಸಿದರು.

ಭಾರತದಲ್ಲಿ ಅರಾಜಕತೆ ಸೃಷ್ಟಿಸಿ, ನೇಪಾಳ ಮತ್ತು ಶ್ರೀಲಂಕಾ ಮಾದರಿಯ ಪರಿಸ್ಥಿತಿ ನಿರ್ಮಿಸಿ ಪ್ರಧಾನಿ ನರೇಂದ್ರ ಮೋದಿ ಅವರ ವರ್ಚಸ್ಸಿಗೆ ಧಕ್ಕೆ ತರುವ ಉದ್ದೇಶದಿಂದ ಕೆಲವರು ಕಾರ್ಯನಿರ್ವಹಿಸುತ್ತಿದ್ದಾರೆ ಎಂದು ಆಪಾದಿಸಿದರು. ಸುದ್ದಿಗೋಷ್ಠಿಯಲ್ಲಿ ಬಿಜೆಪಿ ಜಿಲ್ಲಾಧ್ಯಕ್ಷ ರಾಜು ಕುರುಡಗಿ, ಲಿಂಗರಾಜ ಪಾಟೀಲ, ಎಂ.ಎಸ್. ಕರಿಗೌಡ್ರ, ರವಿ ದಂಡಿನ್, ಬೂದಪ್ಪ ಹಳ್ಳಿ, ಉಷಾ ದಾಸರ, ಸ್ವಾತಿ ಅಕ್ಕಿ, ಎಂ.ಎಂ. ಹಿರೇಮಠ ಸೇರಿದಂತೆ ಹಲವರು ಉಪಸ್ಥಿತರಿದ್ದರು.

> ನೀಟ್ ಪ್ರಶ್ನೆಪತ್ರಿಕೆ ಸೋರಿಕೆ ಪ್ರಕರಣವನ್ನು ಕಾಂಗ್ರೆಸ್ ರಾಜಕೀಯ ಲಾಭಕ್ಕಾಗಿ ಬಳಸಿಕೊಳ್ಳುತ್ತಿದೆ. ವಿದ್ಯಾರ್ಥಿಗಳ ಭಾವನೆಗಳನ್ನು ದುರ್ಬಳಕೆ ಮಾಡಿಕೊಳ್ಳುವ ಪ್ರಯತ್ನ ಮಾಡಬಾರದು.
> – ಸಿ.ಸಿ. ಪಾಟೀಲ, ನರಗುಂದ ಶಾಸಕ

## ಸರ್ಕಾರಿ ಜಾಗ, ರಸ್ತೆ ಸರ್ವೆಗೆ ಸಾರ್ವಜನಿಕರ ಆಗ್ರಹ



**ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಪಟ್ಟಣದ ವಾರ್ಡ್ ಸಂಖ್ಯೆ 7 ಮತ್ತು 9ರ ವ್ಯಾಪ್ತಿಯಲ್ಲಿರುವ ಸಿಟಿ ಸರ್ವೆ ಜಾಗ ಹಾಗೂ ಸರ್ಕಾರಿ ರಸ್ತೆಯನ್ನು ತಕ್ಷಣ ಸರ್ವೆ ಮಾಡಿ ಗಡಿ ಗುರುತಿಸಬೇಕು ಎಂದು ಒತ್ತಾಯಿಸಿ ಸ್ಥಳೀಯ ಸಾರ್ವಜನಿಕರು ಹಾಗೂ ನಿವಾಸಿಗಳು ಬುಧವಾರ ಪುರಸಭೆ ಅಧಿಕಾರಿಗಳಿಗೆ ಮನವಿ ಸಲ್ಲಿಸಿದರು.

ಮನವಿಯಲ್ಲಿ, ವಾರ್ಡ್ ಸಂಖ್ಯೆ 7 ಮತ್ತು 9ರಲ್ಲಿ ಇರುವ ಸಿಟಿ ಸರ್ವೆ ನಂಬರ್‌ನ ಸರ್ಕಾರಿ ಜಾಗ ಹಾಗೂ ಆಸ್ತಿ ಸಂಖ್ಯೆ 3491 ಸಮೀಪದ ಸರ್ಕಾರಿ ರಸ್ತೆ ಸರ್ಕಾರಕ್ಕೆ ಸೇರಿದ್ದು, ಅದರ ನಿಖರ ಗಡಿ ಗುರುತಿಸಲು ತುರ್ತಾಗಿ ಸರ್ವೆ ನಡೆಸಬೇಕೆಂದು ಒತ್ತಾಯಿಸಲಾಗಿದೆ.

ಸರ್ಕಾರಿ ಜಾಗ ಮತ್ತು ರಸ್ತೆಯ ಅಳತೆ ನಡೆಸುವುದರಿಂದ ಸಾರ್ವಜನಿಕರ ಸುಗಮ ಸಂಚಾರಕ್ಕೆ ಅನುಕೂಲವಾಗಲಿದ್ದು, ಸರ್ಕಾರಿ ಆಸ್ತಿ ಒತ್ತುವರಿಯಾಗುವುದನ್ನು ತಡೆಯಲು ಸಹಕಾರಿಯಾಗುತ್ತದೆ. ಆದ್ದರಿಂದ ಸಂಬಂಧಪಟ್ಟ ಅಧಿಕಾರಿಗಳು ಶೀಘ್ರ ಕ್ರಮ ಕೈಗೊಳ್ಳಬೇಕು ಎಂದು ಮನವಿಯಲ್ಲಿ ಆಗ್ರಹಿಸಲಾಗಿದೆ.

ಮನವಿ ಸಲ್ಲಿಸುವ ಸಂದರ್ಭದಲ್ಲಿ ಅಶೋಕ ನೀರಾಲೋಟಿ, ಮಲ್ಲಪ್ಪ ಉಮಚಗಿ, ಈರಪ್ಪ ಅಣ್ಣಿಗೇರಿ, ಚಂದ್ರು ಧರಣಿ, ಅಕ್ಷಯ ಓದುನವರ, ಫಕೀರಪ್ಪ ಉಮಚಗಿ, ಮಲ್ಲಿಕಾರ್ಜುನ ನೀರಾಲೋಟಿ ಸೇರಿದಂತೆ ಸ್ಥಳೀಯರು ಉಪಸ್ಥಿತರಿದ್ದರು.

### ಹೆಸ್ಕಾಂ ಕಚೇರಿ ಎದುರು ಪ್ರತಿಭಟನೆ; ಅಧಿಕಾರಿಗಳಿಗೆ ಮನವಿ ಸಲ್ಲಿಕೆ

## ಸ್ಲಂ ನಿವಾಸಿಗಳಿಗೆ ವಿದ್ಯುತ್ ಸಂಪರ್ಕಕ್ಕೆ ಆಗ್ರಹ



**ವಿಜಯಸಾಕ್ಷಿ ಸುದ್ದಿ, ಗದಗ**

ಗದಗ-ಬೆಟಗೇರಿ ನಗರದ ಸ್ಲಂ ಪ್ರದೇಶಗಳ ನಿವಾಸಿಗಳಿಗೆ ವಿದ್ಯುತ್ ಸಂಪರ್ಕ ಕಲ್ಪಿಸುವಲ್ಲಿ ಹೆಸ್ಕಾಂ ಅಧಿಕಾರಿಗಳು ವಿಳಂಬ ಮಾಡುತ್ತಿದ್ದಾರೆ ಎಂದು ಆರೋಪಿಸಿ ಸ್ಲಂ ಜನಾಂದೋಲನ ಕರ್ನಾಟಕ ಹಾಗೂ ಗದಗ ಜಿಲ್ಲಾ ಸ್ಲಂ ಸಮಿತಿ ನೇತೃತ್ವದಲ್ಲಿ ಬುಧವಾರ ಹೆಸ್ಕಾಂ ಕಚೇರಿ ಎದುರು ಪ್ರತಿಭಟನೆ ನಡೆಸಲಾಯಿತು. ಬಳಿಕ ಅಧಿಕಾರಿಗಳಿಗೆ ಮನವಿ ಸಲ್ಲಿಸಿದ ಪ್ರತಿಭಟನಾಕಾರರು, ಕರ್ನಾಟಕ ಕೊಳಗೇರಿ ಅಭಿವೃದ್ಧಿ ಮಂಡಳಿಯಿಂದ ನಿರಾಕ್ಷೇಪಣಾ ಪತ್ರ (ಎನ್‌ಒಸಿ) ನೀಡಿದ್ದರೂ ವಿದ್ಯುತ್ ಸಂಪರ್ಕ ಕಲ್ಪಿಸಲು ಅನಗತ್ಯ ದಾಖಲೆಗಳನ್ನು ಕೇಳಲಾಗುತ್ತಿದೆ ಎಂದು ಆರೋಪಿಸಿದರು. ಈ ವೇಳೆ ಮಾತನಾಡಿದ ಜಿಲ್ಲಾ ಸ್ಲಂ ಸಮಿತಿ ಅಧ್ಯಕ್ಷ ಇಮ್ತಿಯಾಜ್ ಆರ್. ಮಾನ್ವಿ, ಸ್ಲಂ ನಿವಾಸಿಗಳಿಗೆ ಭೂ ದಾಖಲೆಗಳಿಲ್ಲ ಎಂಬ ಕಾರಣ ನೀಡಿ ವಿದ್ಯುತ್ ಸಂಪರ್ಕ ನಿರಾಕರಿಸುವುದು ಸರಿಯಲ್ಲ. ಬಡವರ ಸಮಸ್ಯೆಗಳಿಗೆ ಸ್ಪಂದಿಸಿ ಅರ್ಹ ಕುಟುಂಬಗಳಿಗೆ ಶೀಘ್ರ ವಿದ್ಯುತ್ ಸಂಪರ್ಕ ಕಲ್ಪಿಸಬೇಕು ಎಂದು ಆಗ್ರಹಿಸಿದರು. ಮನವಿ ಸ್ವೀಕರಿಸಿದ ಹೆಸ್ಕಾಂ ಅಧಿಕಾರಿಗಳು, ಅರ್ಹ ಸ್ಲಂ ನಿವಾಸಿಗಳಿಗೆ ಯಾವುದೇ ತೊಂದರೆಯಾಗದಂತೆ ವಿದ್ಯುತ್ ಸಂಪರ್ಕ ಕಲ್ಪಿಸಲಾಗುವುದು ಎಂದು ಭರವಸೆ ನೀಡಿ ದರು. ಪ್ರತಿಭಟನೆಯಲ್ಲಿ ಮಹಿಳಾ ಸಮಿತಿ ಸಂಚಾಲಕಿ ಪರವೀನ ಬಾನು ಹವಾಲ್ದಾರ, ಮೌಲಾಸಾಬ ಗಚ್ಚಿ, ಶರಣಪ್ಪ ಸೂಡಿ, ಇಬ್ರಾಹಿಂ ಮುಲ್ಲಾ ಸೇರಿದಂತೆ ವಿವಿಧ ಸ್ಲಂ ಪ್ರದೇಶಗಳ ನೂರಾರು ನಿವಾಸಿಗಳು ಭಾಗವಹಿಸಿದ್ದರು.

> ಸ್ಲಂ ನಿವಾಸಿಗಳಿಗೆ ವಿದ್ಯುತ್ ಸಂಪರ್ಕ ನೀಡಲು ವಿಳಂಬ ಮಾಡುವುದು ಬಡವರ ಮೇಲಿನ ಅನ್ಯಾಯ. ಅಧಿಕಾರಿಗಳು ತಾರತಮ್ಯ ನೀತಿ ಕೈಬಿಟ್ಟು ಜನರ ಪರವಾಗಿ ಕೆಲಸ ಮಾಡಬೇಕು.
> – ಇಮ್ತಿಯಾಜ್ ಆರ್. ಮಾನ್ವಿ, ಅಧ್ಯಕ್ಷರು, ಗದಗ ಜಿಲ್ಲಾ ಸ್ಲಂ ಸಮಿತಿ

### ಎಲ್‌ನೀನೋ ಪರಿಣಾಮ ಎದುರಿಸಲು ಅಧಿಕಾರಿಗಳಿಗೆ ಸೂಚನೆ | ರೈತರ ಹಿತ, ಕುಡಿಯುವ ನೀರು ಹಾಗೂ ಅಕ್ರಮ ಮರಳು ಸಾಗಾಟ ತಡೆಗೆ ಒತ್ತು

## ಬರಕ್ಕೆ ಸಮನ್ವಯವೇ ಮದ್ದು: ಚಂದ್ರು ಲಮಾಣಿ



**ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಎಲ್‌ನೀನೋ ಪರಿಣಾಮದಿಂದ ತಾಲೂಕಿನಲ್ಲಿ ಉಂಟಾಗಿರುವ ಬರ ಪರಿಸ್ಥಿತಿಯನ್ನು ಸಮರ್ಥವಾಗಿ ಎದುರಿಸಲು ಕಂದಾಯ, ಕೃಷಿ ಸೇರಿದಂತೆ ಎಲ್ಲ ಇಲಾಖೆಗಳು ಪರಸ್ಪರ ಸಮನ್ವಯದಿಂದ ಜವಾಬ್ದಾರಿಯುತವಾಗಿ ಕಾರ್ಯನಿರ್ವಹಿಸಬೇಕು ಎಂದು ಶಾಸಕ ಡಾ. ಚಂದ್ರು ಲಮಾಣಿ ಅಧಿಕಾರಿಗಳಿಗೆ ಸೂಚಿಸಿದರು.

ಬುಧವಾರ ತಹಸೀಲ್ದಾರ್ ಕಚೇರಿಯಲ್ಲಿ ನಡೆದ ತಾಲೂಕು ಮಟ್ಟದ ವಿಪತ್ತು ನಿರ್ವಹಣಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಬೆಳೆವಿಮೆ ಸಂಬಂಧ ಕೆಲ ಏಜೆಂಟರು ಹಾಗೂ ಪಿಆರ್‌ಒಗಳು ರೈತರನ್ನು ದಾರಿ ತಪ್ಪಿಸುತ್ತಿರುವ ಬಗ್ಗೆ ಅಸಮಾಧಾನ ವ್ಯಕ್ತಪಡಿಸಿದರು. ಬೆಳೆ ದೃಢೀಕರಣ ಹಾಗೂ ಬೆಳೆಹಾನಿ ಸಮೀಕ್ಷೆಯನ್ನು ತ್ವರಿತವಾಗಿ ಪೂರ್ಣಗೊಳಿಸಿ, ಯಾವುದೇ ರೈತ ಬೆಳೆವಿಮೆ ಮತ್ತು ಪರಿಹಾರದಿಂದ ವಂಚಿತರಾಗದಂತೆ ಕ್ರಮ ಕೈಗೊಳ್ಳುವಂತೆ ಸಹಾಯಕ ಕೃಷಿ ನಿರ್ದೇಶಕ ಶಿವಕುಮಾರ ಕಾಶಪ್ಪನವರ ಹಾಗೂ ತೋಟಗಾರಿಕೆ ಅಧಿಕಾರಿ ಪ್ರಶಾಂತ ಕುಲಕರ್ಣಿ ಅವರಿಗೆ ನಿರ್ದೇಶನ ನೀಡಿದರು.

ಬರದಿಂದ ಗ್ರಾಮೀಣ ಪ್ರದೇಶದಲ್ಲಿ ಕೃಷಿ ಹಾಗೂ ಉದ್ಯೋಗ ಎರಡಕ್ಕೂ ಹೊಡೆತ ಬಿದ್ದಿದ್ದು, ಜನರು ಗುಳೆ ಹೋಗುವ ಪರಿಸ್ಥಿತಿ ನಿರ್ಮಾಣವಾಗಿದೆ. ಆದ್ದರಿಂದ ವಿಬಿಜಿರಾಮಜಿ ಯೋಜನೆಯಡಿ ರೈತ ಸಂಪರ್ಕ ರಸ್ತೆಗಳು, ಹಳ್ಳಗಳ ಹೂಳೆತ್ತುವಿಕೆ, ಶಾಲೆಗಳ ಅಭಿವೃದ್ಧಿ ಸೇರಿದಂತೆ ಉದ್ಯೋಗ ಸೃಷ್ಟಿಸುವ ಕಾಮಗಾರಿಗಳನ್ನು ತಕ್ಷಣ ಆರಂಭಿಸಬೇಕು ಎಂದು ಹೇಳಿದರು.

ಕುಡಿಯುವ ನೀರಿಗೆ ಮೊದಲ ಆದ್ಯತೆ ನೀಡಬೇಕು. ನೀರು ಸರಬರಾಜು ಮತ್ತು ಹೆಸ್ಕಾಂ ಇಲಾಖೆಗಳು ಸಮನ್ವಯದಿಂದ ಕೆಲಸ ಮಾಡಿ ನೀರಿನ ಸಮಸ್ಯೆ ನಿವಾರಿಸಬೇಕು. ಜಾನುವಾರುಗಳಿಗೆ ಮೇವು ಕೊರತೆ ಎದುರಾದರೆ ಗೋಶಾಲೆ ಆರಂಭಿಸಲು ಅಗತ್ಯ ಸಿದ್ಧತೆ ಮಾಡಿಕೊಳ್ಳಬೇಕು. ಅಡರಕಟ್ಟಿ, ಬಟ್ಟೂರು ಸೇರಿದಂತೆ ವಿವಿಧ ಗ್ರಾಮಗಳ ಹಳ್ಳಗಳಲ್ಲಿನ ಹೂಳು ತೆರವುಗೊಳಿಸಿ, ಶುದ್ಧ ಕುಡಿಯುವ ನೀರಿನ ಘಟಕಗಳ ಸಮರ್ಪಕ ನಿರ್ವಹಣೆಗೆ ಆದ್ಯತೆ ನೀಡಬೇಕು ಎಂದು ತಾಪಂ ಇಒ ಮಂಜುಳಾ ಹಕಾರಿ ಹಾಗೂ ಎಡಿ ಕೃಷ್ಣಪ್ಪ ಧರ್ಮರ ಅವರಿಗೆ ಸೂಚಿಸಿದರು.

ಪಟ್ಟಣದಲ್ಲಿ ನಿರ್ಮಾಣವಾಗುತ್ತಿರುವ ಕೋಟ್ಯಂತರ ರೂಪಾಯಿ ವೆಚ್ಚದ ಕುಡಿಯುವ ನೀರಿನ ಯೋಜನೆ ಹಾಗೂ ಪ್ರಜಾಸೌಧ ಕಾಮಗಾರಿಗೆ ಅಡ್ಡಿಪಡಿಸುವವರು ಮತ್ತು ಕಾನೂನು ಉಲ್ಲಂಘಿಸುವವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳುವಂತೆ ಪೊಲೀಸ್, ಕಂದಾಯ ಹಾಗೂ ಪುರಸಭೆ ಅಧಿಕಾರಿಗಳಿಗೆ ಶಾಸಕರು ಸೂಚಿಸಿದರು.

ಪ್ರಜಾಸೌಧ ನಿರ್ಮಾಣ ಸ್ಥಳದಲ್ಲಿ ಹಲವು ವರ್ಷಗಳಿಂದ ಗುಡಿಸಲುಗಳಲ್ಲಿ ವಾಸಿಸುತ್ತಿರುವ ಅರ್ಹ ಕುಟುಂಬಗಳಿಗೆ ಶಿಗ್ಲಿ ರಸ್ತೆ ಅಥವಾ ಕೆಂಪಿಗೆರೆ ಪ್ರದೇಶದಲ್ಲಿರುವ ಪುರಸಭೆ ಜಾಗೆಯಲ್ಲಿ ಶಾಶ್ವತ ನೆಲೆ ಕಲ್ಪಿಸಲಾಗುವುದು ಎಂದು ಭರವಸೆ ನೀಡಿದರು.

ಜೊತೆಗೆ ಪರಿಶಿಷ್ಟ ಜಾತಿಯವರಿಗೆ ಜಾತಿ-ಆದಾಯ ಪ್ರಮಾಣಪತ್ರ ಹಾಗೂ ಹಿರಿಯ ನಾಗರಿಕರು ಮತ್ತು ಪಿಂಚಣಿದಾರರಿಗೆ ಅಗತ್ಯ ದಾಖಲೆಗಳನ್ನು ಸಕಾಲದಲ್ಲಿ ವಿತರಿಸುವಂತೆ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಸಭೆಯಲ್ಲಿ ತಹಸೀಲ್ದಾರ್, ತಾಪಂ ಇಒ ಸೇರಿದಂತೆ ಕೃಷಿ, ತೋಟಗಾರಿಕೆ, ಗ್ರಾಮೀಣ ಕುಡಿಯುವ ನೀರು, ಗ್ರಾಮೀಣಾಭಿವೃದ್ಧಿ, ಪೊಲೀಸ್, ಅರಣ್ಯ, ಪಶುಸಂಗೋಪನೆ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

> ಬರ ಪರಿಸ್ಥಿತಿಯನ್ನು ಎದುರಿಸಲು ಎಲ್ಲ ಇಲಾಖೆಗಳು ಸಮನ್ವಯದಿಂದ ಕಾರ್ಯನಿರ್ವಹಿಸಬೇಕು. ಯಾವುದೇ ರೈತ ಸರ್ಕಾರದ ಸೌಲಭ್ಯಗಳಿಂದ ವಂಚಿತರಾಗದಂತೆ ಅಧಿಕಾರಿಗಳು ಜವಾಬ್ದಾರಿಯಿಂದ ಕೆಲಸ ಮಾಡಬೇಕು.
> – ಡಾ. ಚಂದ್ರು ಲಮಾಣಿ, ಶಾಸಕರು

### ಅಕ್ರಮ ಮರಳು ದಂಧೆಗೆ ಕಡಿವಾಣ ಹಾಕಿ!

ತಾಲೂಕಿನಲ್ಲಿ ನಡೆಯುತ್ತಿರುವ ಅಕ್ರಮ ಮರಳು, ಮಣ್ಣು ಹಾಗೂ ಖಡಿ ಸಾಗಾಟಕ್ಕೆ ಸಂಬಂಧಿಸಿದ ಇಲಾಖೆಗಳು ಪರಿಣಾಮಕಾರಿ ಕ್ರಮ ಕೈಗೊಳ್ಳದಿರುವುದಕ್ಕೆ ಶಾಸಕ ಡಾ. ಚಂದ್ರು ಲಮಾಣಿ ತೀವ್ರ ಅಸಮಾಧಾನ ವ್ಯಕ್ತಪಡಿಸಿದರು. ಸಿಸಿ ಕ್ಯಾಮೆರಾಗಳು ಮತ್ತು ಚೆಕ್‌ಪೋಸ್ಟ್‌ಗಳು ನಾಮಮಾತ್ರಕ್ಕೆ ಸೀಮಿತವಾಗಿದ್ದು, ಅಧಿಕೃತ ಸ್ಯಾಂಡ್ ಪಾಯಿಂಟ್‌ಗಳಲ್ಲಿಯೂ ವೇಬ್ರಿಡ್ಜ್ ಇಲ್ಲದಿರುವುದು ಅಕ್ರಮಕ್ಕೆ ಅವಕಾಶ ಕಲ್ಪಿಸಿದೆ ಎಂದು ಅವರು ಹೇಳಿದರು. ಅಕ್ರಮ ಸಾಗಾಟವನ್ನು ತಡೆಯಲು ಕಂದಾಯ ಮತ್ತು ಪೊಲೀಸ್ ಇಲಾಖೆ ಜಂಟಿಯಾಗಿ ಕಟ್ಟುನಿಟ್ಟಿನ ಕಾರ್ಯಾಚರಣೆ ನಡೆಸಬೇಕು ಎಂದು ಸೂಚಿಸಿದರು. ಇದಕ್ಕೆ ಪ್ರತಿಕ್ರಿಯಿಸಿದ ಅಧಿಕಾರಿಗಳು, ಅಕ್ರಮ ಸಾಗಾಟಕ್ಕೆ ಸಂಬಂಧಿಸಿದಂತೆ ಹಲವು ಪ್ರಕರಣಗಳನ್ನು ದಾಖಲಿಸಿ ದಂಡ ವಿಧಿಸಲಾಗಿದೆ. ಆದರೆ ದಂಧೆಕೋರರ ಬೆದರಿಕೆಯಿಂದ ಕೆಳಹಂತದ ಅಧಿಕಾರಿಗಳು ಕ್ರಮ ಕೈಗೊಳ್ಳಲು ಹಿಂಜರಿಯುತ್ತಿರುವುದರಿಂದ ಎಲ್ಲ ಇಲಾಖೆಗಳ ಸಹಕಾರ ಅಗತ್ಯವಾಗಿದೆ ಎಂದು ಸಭೆಯಲ್ಲಿ ತಿಳಿಸಿದರು.

### ತಂಬ್ರಹಳ್ಳಿಯಲ್ಲಿ ವಲಯ ಮಟ್ಟದ ಸಮ್ಮೇಳನ; ಸರ್ಕಾರದ ವಿರುದ್ಧ ಸಂಘಟಿತ ಹೋರಾಟಕ್ಕೆ ಕರೆ

## ಅಕ್ಷರ ದಾಸೋಹ ನೌಕರರಿಗೆ ಕನಿಷ್ಠ ವೇತನ ನೀಡಿ




**ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ**

ತಾಲೂಕಿನ ತಂಬ್ರಹಳ್ಳಿ ಗ್ರಾಮದಲ್ಲಿ ಅಕ್ಷರ ದಾಸೋಹ ನೌಕರರ ಸಂಘ (ಸಿಐಟಿಯು) ವತಿಯಿಂದ ವಲಯ ಮಟ್ಟದ ಸಮ್ಮೇಳನ ನಡೆಯಿತು. ಸಮ್ಮೇಳನವನ್ನು ಉದ್ಘಾಟಿಸಿ ಮಾತನಾಡಿದ ಸಿಐಟಿಯು ರಾಜ್ಯ ಉಪಾಧ್ಯಕ್ಷ ಆರ್.ಎಸ್. ಬಸವರಾಜ, ಕಳೆದ 25 ವರ್ಷಗಳಿಂದ ಶಾಲೆಗಳಲ್ಲಿ ಲಕ್ಷಾಂತರ ಮಕ್ಕಳಿಗೆ ಮಧ್ಯಾಹ್ನದ ಬಿಸಿಯೂಟ ತಯಾರಿಸಿ ಸಮಯಕ್ಕೆ ಸರಿಯಾಗಿ ವಿತರಿಸುತ್ತಿರುವ ಅಕ್ಷರ ದಾಸೋಹ ನೌಕರರಿಗೆ ದುಡಿಮೆಗೆ ತಕ್ಕ ವೇತನ ಇದುವರೆಗೂ ದೊರೆತಿಲ್ಲ ಎಂದು ಬೇಸರ ವ್ಯಕ್ತಪಡಿಸಿದರು. ಅಗತ್ಯ ವಸ್ತುಗಳ ಬೆಲೆ ಏರಿಕೆಯಿಂದ ಜೀವನ ನಿರ್ವಹಣೆ ದುಸ್ತರವಾಗಿದ್ದು, ಕೆಲಸದ ಒತ್ತಡ ಹೆಚ್ಚಿದ್ದರೂ ಸರ್ಕಾರ ನೌಕರರ ಸಮಸ್ಯೆಗಳ ಕಡೆ ನಿರ್ಲಕ್ಷ್ಯ ವಹಿಸಿದೆ. ಅಕ್ಷರ ದಾಸೋಹ ನೌಕರರಿಗೆ ಕನಿಷ್ಠ ವೇತನ ನೀಡದಿರುವುದು ಮಹಿಳಾ ವಿರೋಧಿ ನೀತಿಯಾಗಿದೆ. ಆದ್ದರಿಂದ ಸರ್ಕಾರದ ವಿರುದ್ಧ ಸಂಘಟಿತ ಹೋರಾಟ ನಡೆಸಬೇಕಾದ ಅಗತ್ಯವಿದೆ ಎಂದು ಕರೆ ನೀಡಿದರು.

ಸಮ್ಮೇಳನದ ಅಧ್ಯಕ್ಷತೆಯನ್ನು ಸುಜಾತ ವಹಿಸಿದ್ದರು. ಮುಖ್ಯ ಅತಿಥಿಗಳಾಗಿ ಸಿಐಟಿಯು ಸಂಚಾಲಕ ಎಸ್. ಜಗನ್ನಾಥ, ಸಂಘದ ಮುಖಂಡರಾದ ಮಲ್ಲಮ್ಮ, ಸುನಂದಾ, ಲತಾ ಉಪಸ್ಥಿತರಿದ್ದರು. ಕೆ. ಗೌರಮ್ಮ, ಕಾರ್ಯದರ್ಶಿ, ಅಕ್ಷರ ದಾಸೋಹ ನೌಕರರ ಸಂಘ (ಸಿಐಟಿಯು), ಕಾರ್ಯಕ್ರಮ ನಿರೂಪಿಸಿದರು. ತಾಲೂಕಿನ ವಿವಿಧ ಗ್ರಾಮಗಳಿಂದ ಆಗಮಿಸಿದ್ದ ಅಕ್ಷರ ದಾಸೋಹ ನೌಕರರು ಸಮ್ಮೇಳನದಲ್ಲಿ ಭಾಗವಹಿಸಿದ್ದರು.

> 25 ವರ್ಷಗಳಿಂದ ಸೇವೆ ಸಲ್ಲಿಸುತ್ತಿರುವ ಅಕ್ಷರ ದಾಸೋಹ ನೌಕರರಿಗೆ ಕನಿಷ್ಠ ವೇತನ ನೀಡದಿರುವುದು ಸರ್ಕಾರದ ಮಹಿಳಾ ವಿರೋಧಿ ಧೋರಣೆಯಾಗಿದೆ. ತಮ್ಮ ಹಕ್ಕುಗಳಿಗಾಗಿ ನೌಕರರು ಸಂಘಟಿತ ಹೋರಾಟ ನಡೆಸಬೇಕು.
> – ಆರ್.ಎಸ್. ಬಸವರಾಜ, ರಾಜ್ಯ ಉಪಾಧ್ಯಕ್ಷರು, ಸಿಐಟಿಯು

## ಬೆಂಕಿ ಅವಘಡ ಸಂತ್ರಸ್ತ ರೈತನಿಗೆ ₹2.18 ಲಕ್ಷ ಪರಿಹಾರ

**ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ತಾಲೂಕಿನ ಶಿಗ್ಲಿ ಗ್ರಾಮದ ರೈತ ಬಸವರಾಜ ಬೆಲಗಜ್ಜರಿ ಅವರ ಮೇವಿನ ಬಣವೆ ಹಾಗೂ ಕೃಷಿ ಉತ್ಪನ್ನಗಳು ಆಕಸ್ಮಿಕ ಬೆಂಕಿ ಅವಘಡದಿಂದ ಹಾನಿಗೊಳಗಾದ ಹಿನ್ನೆಲೆಯಲ್ಲಿ, ಹೆಸ್ಕಾಂ ಇಲಾಖೆಯಿಂದ ಮಂಜೂರಾದ ₹2.18 ಲಕ್ಷ ಪರಿಹಾರಧನದ ಚೆಕ್‌ನ್ನು ಶಾಸಕ ಡಾ. ಚಂದ್ರು ಲಮಾಣಿ ಬುಧವಾರ ರೈತರಿಗೆ ವಿತರಿಸಿದರು.

ಈ ಸಂದರ್ಭದಲ್ಲಿ ತಹಸೀಲ್ದಾರ ಧನಂಜಯ ಎಂ., ಹೆಸ್ಕಾಂ ಸಹಾಯಕ ಕಾರ್ಯನಿರ್ವಾಹಕ ಎಂಜಿನಿಯರ್ ಆಂಜನಪ್ಪ ಬಿ., ತಾಪಂ ಇಒ ಮಂಜುಳಾ ಹಕಾರಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

### ಸಿಂಗಟಾಲೂರು ಏತ ನೀರಾವರಿ ಯೋಜನೆಯ ಪೈಪ್‌ಲೈನ್‌ಗೆ ವಿರೋಧ | ದೇವಾಲಯ ಎತ್ತಂಗಡಿ ಕೈಬಿಡುವಂತೆ ಜಿಲ್ಲಾಡಳಿತಕ್ಕೆ ಆಗ್ರಹ

## ದಂಡಿನ ದುರ್ಗಮ್ಮ ದೇವಾಲಯ ಉಳಿಸಿ



**ವಿಜಯಸಾಕ್ಷಿ ಸುದ್ದಿ, ಗದಗ**

ಸಿಂಗಟಾಲೂರು ಏತ ನೀರಾವರಿ ಯೋಜನೆಯ ಪೈಪ್‌ಲೈನ್ ಕಾಮಗಾರಿಯಿಂದ ನಾಡಿನ ಲಕ್ಷಾಂತರ ಭಕ್ತರ ಆರಾಧ್ಯ ದೈವವಾದ ದಂಡಿನ ದುರ್ಗಮ್ಮ ದೇವಾಲಯಕ್ಕೆ ಧಕ್ಕೆ ಉಂಟಾಗುವ ಆತಂಕ ವ್ಯಕ್ತಪಡಿಸಿ, ದೇವಾಲಯವನ್ನು ಯಾವುದೇ ಕಾರಣಕ್ಕೂ ಎತ್ತಂಗಡಿ ಮಾಡಬಾರದು ಎಂದು ಒತ್ತಾಯಿಸಿ ವಿವಿಧ ಹಿಂದೂ ಸಂಘಟನೆಗಳ ಕಾರ್ಯಕರ್ತರು ಹಾಗೂ ಸಹಸ್ರಾರು ಭಕ್ತರು ಬುಧವಾರ ಗದಗದಲ್ಲಿ ಬೃಹತ್ ಪಾದಯಾತ್ರೆ ನಡೆಸಿ ಜಿಲ್ಲಾಡಳಿತಕ್ಕೆ ಮನವಿ ಸಲ್ಲಿಸಿದರು.

ನಗರದ ಪ್ರಮುಖ ರಸ್ತೆಗಳಲ್ಲಿ ಪಾದಯಾತ್ರೆ ನಡೆಸಿದ ಪ್ರತಿಭಟನಾಕಾರರು, ಸಿಂಗಟಾಲೂರು ಏತ ನೀರಾವರಿ ಯೋಜನೆಯ ಅಧಿಕಾರಿಗಳ ವಿರುದ್ಧ ಘೋಷಣೆಗಳನ್ನು ಕೂಗಿ, ದೇವಾಲಯದ ಸಂರಕ್ಷಣೆಗೆ ತಕ್ಷಣ ಕ್ರಮ ಕೈಗೊಳ್ಳುವಂತೆ ಆಗ್ರಹಿಸಿದರು. ಪ್ರತಿಭಟನೆಯ ಬಳಿಕ ಮಾತನಾಡಿದ ಶಿವರಾಮಕೃಷ್ಣ ಸಂಘಟನೆಯ ಮುಖಂಡ ರಾಜೂ ಖಾನಪ್ಪನವರ, ಸುಮಾರು ಎರಡು ಶತಮಾನಗಳ ಇತಿಹಾಸ ಹೊಂದಿರುವ ದಂಡಿನ ದುರ್ಗಮ್ಮ ದೇವಾಲಯವು ಉತ್ತರ ಕರ್ನಾಟಕದ ಪ್ರಮುಖ ಧಾರ್ಮಿಕ ಕ್ಷೇತ್ರವಾಗಿದೆ. ಕರ್ನಾಟಕ, ಮಹಾರಾಷ್ಟ್ರ, ಆಂಧ್ರಪ್ರದೇಶ, ತಮಿಳುನಾಡು ಹಾಗೂ ಛತ್ತೀಸ್‌ಗಢ ಸೇರಿದಂತೆ ವಿವಿಧ ರಾಜ್ಯಗಳ ಲಕ್ಷಾಂತರ ಭಕ್ತರ ಆರಾಧನಾ ಕೇಂದ್ರವಾಗಿರುವ ಈ ದೇವಾಲಯವನ್ನು ಯಾವುದೇ ಕಾರಣಕ್ಕೂ ಸ್ಥಳಾಂತರಿಸಬಾರದು ಎಂದು ಒತ್ತಾಯಿಸಿದರು. ರೈತರ ಜಮೀನುಗಳಿಗೆ ನೀರಾವರಿ ಸೌಲಭ್ಯ ಕಲ್ಪಿಸುವ ಯೋಜನೆಗೆ ತಮ್ಮ ವಿರೋಧವಿಲ್ಲ. ಆದರೆ ದೇವಾಲಯದ ಕೆಳಭಾಗದಿಂದ ಪೈಪ್‌ಲೈನ್ ಅಳವಡಿಸುವುದರಿಂದ ದೇವಾಲಯದ ಅಸ್ತಿತ್ವ ಮತ್ತು ಭದ್ರತೆಗೆ ಧಕ್ಕೆ ಉಂಟಾಗುವ ಆತಂಕವಿದೆ. ಆದ್ದರಿಂದ ಪೈಪ್‌ಲೈನ್ ಮಾರ್ಗವನ್ನು ಮರುಪರಿಶೀಲಿಸಿ, ಸ್ಥಳ ಪರಿಶೀಲನೆ ನಡೆಸಿದ ಬಳಿಕವೇ ಅಂತಿಮ ನಿರ್ಧಾರ ಕೈಗೊಳ್ಳಬೇಕು ಎಂದು ಆಗ್ರಹಿಸಿದರು. ಮನವಿಯಲ್ಲಿ ದೇವಾಲಯವನ್ನು ಸ್ಥಳಾಂತರಿಸದಂತೆ ಆದೇಶ ಹೊರಡಿಸುವುದು, ಪೈಪ್‌ಲೈನ್‌ಗೆ ಪರ್ಯಾಯ ಮಾರ್ಗ ಪರಿಶೀಲಿಸುವುದು, ಪುರಾತತ್ವ ಇಲಾಖೆ, ಭೂವಿಜ್ಞಾನ ಹಾಗೂ ದೇವಾಲಯ ಸಂರಕ್ಷಣಾ ತಜ್ಞರಿಂದ ತಾಂತ್ರಿಕ ಪರಿಶೀಲನೆ ನಡೆಸುವುದು, ವೈಜ್ಞಾನಿಕ ರೀತಿಯಲ್ಲಿ ಕಾಮಗಾರಿ ಕೈಗೊಳ್ಳುವುದು ಹಾಗೂ ಜಿಲ್ಲಾಡಳಿತ, ನೀರಾವರಿ ನಿಗಮ, ತಜ್ಞರು ಮತ್ತು ಭಕ್ತರ ಪ್ರತಿನಿಧಿಗಳನ್ನು ಒಳಗೊಂಡ ಮೇಲ್ವಿಚಾರಣಾ ಸಮಿತಿ ರಚಿಸುವಂತೆ ಒತ್ತಾಯಿಸಲಾಗಿದೆ. ಮನವಿ ಸ್ವೀಕರಿಸಿದ ಅಪರ ಜಿಲ್ಲಾಧಿಕಾರಿ ಡಾ. ದುರ್ಗೇಶ್ ಕೆ.ಆರ್., ಸರ್ಕಾರಕ್ಕೆ ವರದಿ ಸಲ್ಲಿಸಿ ಸೂಕ್ತ ಕ್ರಮ ಕೈಗೊಳ್ಳುವುದಾಗಿ ಭರವಸೆ ನೀಡಿದರು.ಪ್ರತಿಭಟನೆಯಲ್ಲಿ ಆನಂದ ಚವ್ಹಾಣ, ಮಾರುತಿ ಕಟ್ಟಿಮನಿ, ರಾಜೂ ಚವ್ಹಾಣ, ಅಪ್ಪಣ್ಣ ಹರಣಶಿಕಾರಿ, ವಾಸು ಕಾಳೆ, ಭುವಿರಾಜ ಹರಣಶಿಕಾರಿ, ವಿಕಾಸ ಕಾಳೆ, ಕಲ್ಲಪ್ಪ ಕಟ್ಟಿಮನಿ, ಪರಶುರಾಮ ಹರಣಶಿಕಾರಿ, ಚಂದ್ರು ಕಟ್ಟಿಮನಿ, ಬಸವರಾಜ ಹರಣಶಿಕಾರಿ, ಅರ್ಜುನ ದೊಡ್ಡಮನಿ, ಚಂದ್ರು ಚವ್ಹಾಣ, ದೇವಪ್ಪ ದೊಡ್ಡಮಾಗಿ, ಮಲ್ಲೇಶ ಚವ್ಹಾಣ, ಚಂದ್ರು ಗಾಯಕವಾಡ, ಪರಶುರಾಮ ಗಾಯಕವಾಡ, ಪೂಜಾ ಬೇವೂರ, ಚನ್ನಮ್ಮ ಹುಳಕಣ್ಣವರ, ಜಯಶ್ರೀ ಪವಾರ, ಚಂದ್ರು ಕರಿಸೋಮನಗೌಡರ, ಗಿರೀಶ ಲಮಾಣಿ, ಮಂಜುನಾಥ ಮುಳಗುಂದ, ಮಹೇಶ ರೋಖಡೆ ಸೇರಿದಂತೆ ಹಲವರು ಭಾಗವಹಿಸಿದ್ದರು.

## ಸಂಕ್ಷಿಪ್ತ ಸುದ್ದಿಗಳು

### ಇಂದು ಜಿಲ್ಲಾ ಮಟ್ಟದ ವಿಶೇಷ ತರಬೇತಿ

**ವಿಜಯಸಾಕ್ಷಿ ಸುದ್ದಿ, ಗದಗ**

ಗದಗ ಜಿಲ್ಲೆಯ ಎಲ್ಲಾ ಹಾಲು ಉತ್ಪಾದಕರ ಸಹಕಾರ ಸಂಘಗಳ ಅಧ್ಯಕ್ಷರು ಹಾಗೂ ಮುಖ್ಯ ಕಾರ್ಯನಿರ್ವಾಹಕರಿಗೆ ಜುಲೈ 23ರಂದು ಜಿಲ್ಲಾ ಮಟ್ಟದ ವಿಶೇಷ ತರಬೇತಿ ಶ್ಯಿಬಿರ ಆಯೋಜಿಸಲಾಗಿದೆ.

ಸಹಕಾರ ಇಲಾಖೆ, ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳ, ಗದಗ ಜಿಲ್ಲಾ ಸಹಕಾರ ಯೂನಿಯನ್, ಪಶುಪಾಲನಾ ಮತ್ತು ಪಶುವೈದ್ಯ ಸೇವಾ ಇಲಾಖೆ ಹಾಗೂ ಧಾರವಾಡ, ಗದಗ ಮತ್ತು ಉತ್ತರ ಕನ್ನಡ ಜಿಲ್ಲಾ ಸಹಕಾರ ಹಾಲು ಉತ್ಪಾದಕರ ಸಂಘಗಳ ಒಕ್ಕೂಟದ ಸಂಯುಕ್ತ ಆಶ್ರಯದಲ್ಲಿ ಬೆಳಿಗ್ಗೆ 10.30ಕ್ಕೆ ನಗರದ ಪಶುವೈದ್ಯಕೀಯ ಪಾಲಿಕ್ಲಿನಿಕ್ ಸಭಾಂಗಣದಲ್ಲಿ ತರಬೇತಿ ಕಾರ್ಯಕ್ರಮ ನಡೆಯಲಿದೆ.

ಗದಗ ಜಿಲ್ಲಾ ಸಹಕಾರ ಯೂನಿಯನ್ ಅಧ್ಯಕ್ಷ ಸಿ.ಎಂ. ಪಾಟೀಲ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಲಿದ್ದು, ಕರ್ನಾಟಕ ರಾಜ್ಯ ಸಹಕಾರಿ ಹಾಲು ಉತ್ಪಾದಕರ ಮಹಾಮಂಡಳದ ನಿರ್ದೇಶಕ ಎಚ್.ಜಿ. ಹಿರೇಗೌಡ್ರ ಉದ್ಘಾಟಿಸಲಿದ್ದಾರೆ. ಪಶುಪಾಲನಾ ಮತ್ತು ಪಶುವೈದ್ಯ ಸೇವಾ ಇಲಾಖೆಯ ಉಪನಿರ್ದೇಶಕ ಡಾ. ಎಚ್.ಬಿ. ಹುಲಗಣ್ಣವರ ಸಹಕಾರಿ ಪಿತಾಮಹರ ಭಾವಚಿತ್ರಕ್ಕೆ ಪುಷ್ಪಾರ್ಚನೆ ನೆರವೇರಿಸಲಿದ್ದಾರೆ.

ಕಾರ್ಯಾಗಾರದಲ್ಲಿ ಜಾನುವಾರುಗಳ ರೋಗಗಳು ಹಾಗೂ ನಿಯಂತ್ರಣ ಕ್ರಮಗಳು, ಶುದ್ಧ ಮತ್ತು ಅಧಿಕ ಹಾಲು ಉತ್ಪಾದನೆ, ಪಶು ಆಹಾರ ಹಾಗೂ ಮೇವು ಬೆಳೆಗಳ ವೈಜ್ಞಾನಿಕ ನಿರ್ವಹಣೆ ಕುರಿತು ತಜ್ಞರು ಉಪನ್ಯಾಸ ನೀಡಲಿದ್ದಾರೆ.

ಕಾರ್ಯಕ್ರಮದಲ್ಲಿ ಗದಗ ಜಿಲ್ಲಾ ಸಹಕಾರ ಯೂನಿಯನ್ ಉಪಾಧ್ಯಕ್ಷ ವಾಯ್.ಎಫ್. ಪಾಟೀಲ, ನಿರ್ದೇಶಕರಾದ ಎಂ.ಎಫ್. ಕಲಗುಡಿ, ಎಸ್.ಎಸ್. ಪಟ್ಟಣಶೆಟ್ಟಿ, ಎಸ್.ಕೆ. ಕುರಡಗಿ, ಸಹಕಾರ ಸಂಘಗಳ ಉಪನಿಬಂಧಕಿ ಎಸ್.ಎಸ್. ಕಬಾಡೆ, ಲೆಕ್ಕಪರಿಶೋಧನಾ ಇಲಾಖೆಯ ಉಪನಿರ್ದೇಶಕ ಹೆಚ್. ಮಂಜಪ್ಪ, ಜಿಲ್ಲಾ ಪಾಲಿಕ್ಲಿನಿಕ್ ಉಪನಿರ್ದೇಶಕ ಡಾ. ವಾಯ್.ಆರ್. ಜೇಂದಿ, ಸಹಾಯಕ ನಿಬಂಧಕಿ ಪುಷ್ಪಾ ಕೆ. ಕಡಿವಾಳ, ತಾಲೂಕು ಮುಖ್ಯ ಪಶುವೈದ್ಯಾಧಿಕಾರಿ ಎಚ್.ವೈ. ಹೊನ್ನಿನಾಯ್ಕರ, ಧಾರವಾಡ ಹಾಲು ಒಕ್ಕೂಟದ ವ್ಯವಸ್ಥಾಪಕ ನಿರ್ದೇಶಕ ಡಿ.ಟಿ. ಕಳಸದ, ಸಹಕಾರ ಅಭಿವೃದ್ಧಿ ಅಧಿಕಾರಿ ಬಿ.ಆರ್. ನಿಡಗುಂದಿ, ಜಿಲ್ಲಾ ಮುಖ್ಯಸ್ಥ ಡಾ. ಪ್ರಸನ್ನ ಎಸ್. ಪಟ್ಟೇದ, ವಿಸ್ತರಣಾಧಿಕಾರಿಗಳಾದ ದಿಲೀಪ್ ಐ. ನದಾಫ ಹಾಗೂ ಕಿರಣಕುಮಾರ ಅ. ಹುಗ್ಗಿ ಮುಖ್ಯ ಅತಿಥಿಗಳಾಗಿ ಭಾಗವಹಿಸಲಿದ್ದಾರೆ.

ತರಬೇತಿ ಶ್ಯಿಬಿರದಲ್ಲಿ ಜಿಲ್ಲೆಯ ಎಲ್ಲಾ ಹಾಲು ಉತ್ಪಾದಕರ ಸಹಕಾರ ಸಂಘಗಳ ಅಧ್ಯಕ್ಷರು ಹಾಗೂ ಮುಖ್ಯ ಕಾರ್ಯನಿರ್ವಾಹಕರು ಭಾಗವಹಿಸಿ ಇದರ ಸದುಪಯೋಗ ಪಡೆಯುವಂತೆ ಗದಗ ಜಿಲ್ಲಾ ಸಹಕಾರ ಯೂನಿಯನ್ ಮುಖ್ಯ ಕಾರ್ಯನಿರ್ವಾಹಣಾಧಿಕಾರಿ ಚಂದ್ರಶೇಖರ ಎಸ್. ಕರಿಯಪ್ಪನವರ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಖಜಾನೆ ಇಲಾಖೆಯ ಉಪನಿರ್ದೇಶಕರಾಗಿ ಟಿ.ಎಂ. ದೇವರಮನಿ ಅಧಿಕಾರ ಸ್ವೀಕಾರ



**ವಿಜಯಸಾಕ್ಷಿ ಸುದ್ದಿ, ಗದಗ**

ಸರ್ಕಾರದ ಆದೇಶದಂತೆ ಗದಗ ಜಿಲ್ಲಾ ಖಜಾನೆ ಇಲಾಖೆಯ ಉಪನಿರ್ದೇಶಕರಾಗಿ ಟಿ.ಎಂ. ದೇವರಮನಿ ಅಧಿಕಾರ ಸ್ವೀಕರಿಸಿದರು.

ಈ ಹಿನ್ನೆಲೆಯಲ್ಲಿ ಜಿಲ್ಲಾ ಖಜಾನೆ ಕಚೇರಿಯಲ್ಲಿ ಮಂಗಳವಾರ ಆಯೋಜಿಸಿದ್ದ ಅಭಿನಂದನಾ ಸಮಾರಂಭದಲ್ಲಿ ಇಲಾಖೆಯ ಅಧಿಕಾರಿಗಳು ಹಾಗೂ ಸಿಬ್ಬಂದಿ ಹೂಗುಚ್ಛ ನೀಡಿ, ಶಾಲು ಹೊದಿಸಿ ನೂತನ ಉಪನಿರ್ದೇಶಕರನ್ನು ಆತ್ಮೀಯವಾಗಿ ಸನ್ಮಾನಿಸಿದರು.

ಈ ವೇಳೆ ಮಾತನಾಡಿದ ಟಿ.ಎಂ. ದೇವರಮನಿ, ಸರ್ಕಾರದ ನಿಯಮಾನುಸಾರ ಪಾರದರ್ಶಕ, ಜವಾಬ್ದಾರಿಯುತ ಹಾಗೂ ಜನಸ್ನೇಹಿ ಆಡಳಿತಕ್ಕೆ ಮೊದಲ ಆದ್ಯತೆ ನೀಡಲಾಗುವುದು. ಇಲಾಖೆಯ ಅಧಿಕಾರಿಗಳು ಮತ್ತು ಸಿಬ್ಬಂದಿಯ ಸಹಕಾರದೊಂದಿಗೆ ಖಜಾನೆ ಇಲಾಖೆಯ ಕಾರ್ಯನಿರ್ವಹಣೆಯನ್ನು ಇನ್ನಷ್ಟು ಪರಿಣಾಮಕಾರಿಯಾಗಿ ಹಾಗೂ ಸುಗಮವಾಗಿ ನಡೆಸಲು ಪ್ರಾಮಾಣಿಕವಾಗಿ ಶ್ರಮಿಸುವುದಾಗಿ ತಿಳಿಸಿದರು.

ಕಾರ್ಯಕ್ರಮದಲ್ಲಿ ಲಕ್ಕುಂಡಿ ಪಾರಂಪರಿಕ ಪ್ರದೇಶಾಭಿವೃದ್ಧಿ ಪ್ರಾಧಿಕಾರದ ಆಯುಕ್ತ ಡಾ. ಶರಣು ಗೋಗೇರಿ, ಪ್ರವಾಸೋದ್ಯಮ ಇಲಾಖೆಯ ಸಹಾಯಕ ನಿರ್ದೇಶಕ ಕೊಟ್ರೇಶ್ ವಿಭೂತಿ, ಶಿವಕುಮಾರ ಕುರಿ, ಎಂ.ಎಚ್. ಕಂಬಳಿ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಹಾಗೂ ಸಿಬ್ಬಂದಿ ಉಪಸ್ಥಿತರಿದ್ದು, ನೂತನ ಉಪನಿರ್ದೇಶಕರಿಗೆ ಶುಭ ಹಾರೈಸಿದರು.

ಆತ್ಮೀಯ ವಾತಾವರಣದಲ್ಲಿ ನಡೆದ ಸಮಾರಂಭದಲ್ಲಿ ಅಧಿಕಾರಿಗಳು ಹಾಗೂ ಸಿಬ್ಬಂದಿ ದೇವರಮನಿ ಅವರ ಆಡಳಿತಾವಧಿ ಯಶಸ್ವಿಯಾಗಲೆಂದು ಹಾರೈಸಿದರು.

## ಸಿಸಿಟಿವಿಯೇ ಬಯಲು ಮಾಡಿತು ಸುಳ್ಳು ಕಳ್ಳತನ

### 65.95 ಲಕ್ಷ ದೋಚಿದಂತೆ ದೂರು ಕೊಟ್ಟ ಮಾಲೀಕನ ಸಂಚು ಫೇಲ್!




**ವಿಜಯಸಾಕ್ಷಿ ಸುದ್ದಿ, ಬೆಳಗಾವಿ**

65.95 ಲಕ್ಷ ರೂಪಾಯಿ ಮೌಲ್ಯದ ಚಿನ್ನಾಭರಣ ಕಳ್ಳತನವಾಗಿದೆ ಎಂದು ಪೊಲೀಸ್ ಠಾಣೆ ಮೆಟ್ಟಿಲೇರಿದ್ದ ಚಿನ್ನದಂಗಡಿ ಮಾಲೀಕನೇ ಪ್ರಕರಣದ ಮಾಸ್ಟರ್ ಮೈಂಡ್ ಎಂಬ ಸತ್ಯ ಬೆಳಕಿಗೆ ಬಂದಿದೆ. ವಿಮೆ ಹಣ ಪಡೆಯುವುದು ಮತ್ತು ಅಡವಿಟ್ಟಿದ್ದ ಚಿನ್ನವನ್ನು ಅಕ್ರಮವಾಗಿ ವಶಕ್ಕೆ ಪಡೆಯುವ ಉದ್ದೇಶದಿಂದ ಕಳ್ಳತನದ ನಾಟಕ ರೂಪಿಸಿದ್ದ ಆರೋಪಿ ಕೊನೆಗೆ ಸಿಸಿಟಿವಿ ದೃಶ್ಯಗಳಲ್ಲೇ ಸಿಕ್ಕಿಬಿದ್ದಿದ್ದಾನೆ.ರಾಮದೇವ ಗಲ್ಲಿಯಲ್ಲಿರುವ ವ್ಹಿ.ಪಿ ವೇರ್ಣೇಕರ ಆಂಡ್ ಸನ್ಸ್ ಚಿನ್ನದಂಗಡಿಯ ಮಾಲೀಕ ಕೃಷ್ಣಾನಂದ ವೇರ್ಣೇಕರ, ಅಂಗಡಿಯಿಂದ ಚಿನ್ನಾಭರಣ, ಬೆಳ್ಳಿ ಹಾಗೂ ನಗದು ಕಳುವಾಗಿದೆ ಎಂದು ಖಡೇಬಜಾರ್ ಠಾಣೆಗೆ ದೂರು ನೀಡಿದ್ದರು.

ಪ್ರಕರಣ ದಾಖಲಿಸಿಕೊಂಡ ಪೊಲೀಸರು ಸ್ಥಳ ಪರಿಶೀಲನೆ ನಡೆಸಿ ಸಿಸಿಟಿವಿ ದೃಶ್ಯಗಳನ್ನು ಸೂಕ್ಷ್ಮವಾಗಿ ಪರಿಶೀಲಿಸಿದಾಗ ಆರೋಪಿಯ ಸಂಚು ಬಯಲಾಗಿದೆ. ಕಳ್ಳತನಕ್ಕೂ ಮುನ್ನ ಕ್ಯಾಮೆರಾ ವ್ಯವಸ್ಥೆಯನ್ನು ಬಂದ್ ಮಾಡಲು ಆರೋಪಿ ಯತ್ನಿಸಿದ್ದ. ಆದರೆ ಡಿಸ್‌ಪ್ಲೇ ಮಾತ್ರ ಸ್ಥಗಿತಗೊಂಡಿದ್ದು, ಕ್ಯಾಮೆರಾ ನಿರಂತರವಾಗಿ ರೆಕಾರ್ಡ್ ಮಾಡುತ್ತಿತ್ತು. ಪರಿಣಾಮ ಅಂಗಡಿಯೊಳಗಿಂದ ಚಿನ್ನಾಭರಣ ಹಾಗೂ ನಗದನ್ನು ತೆಗೆದು ಸ್ಕೂಟಿಯ ಡಿಕ್ಕಿಗೆ ಸಾಗಿಸುತ್ತಿರುವ ದೃಶ್ಯಗಳು ಪೊಲೀಸರ ಕೈಗೆ ಸಿಕ್ಕಿವೆ. ವಿಚಾರಣೆ ವೇಳೆ ಕೃಷ್ಣಾನಂದ ತನ್ನ ತಪ್ಪನ್ನು ಒಪ್ಪಿಕೊಂಡಿದ್ದಾನೆ.

### ಅಂತರ್ಜಲ ಸಂರಕ್ಷಣೆ, ಬೋರ್‌ವೆಲ್ ರೀಚಾರ್ಜ್, ಜಲ ಆಯವ್ಯಯಕ್ಕೆ ಒತ್ತು

# ಎಲ್ ನೀನೋ ಎಚ್ಚರಿಕೆ: ಬರ ಎದುರಿಸಲು ಬೃಹತ್ ಕಾರ್ಯತಂತ್ರ

**ವಿಜಯಸಾಕ್ಷಿ ಸುದ್ದಿ, ಬೆಂಗಳೂರು**

ಜಾಗತಿಕ ಮಟ್ಟದಲ್ಲಿ ತೀವ್ರಗೊಳ್ಳುತ್ತಿರುವ ಟಿಎಲ್ ನೀನೋಟಿ (El Ni0o) ಹವಾಮಾನ ವೈಪರೀತ್ಯದಿಂದ ರಾಜ್ಯದಲ್ಲಿ ಬರದ ಪರಿಸ್ಥಿತಿ ನಿರ್ಮಾಣವಾಗುವ ಸಾಧ್ಯತೆ ಹಿನ್ನೆಲೆಯಲ್ಲಿ ಕರ್ನಾಟಕ ಸರ್ಕಾರ ಮುನ್ನೆಚ್ಚರಿಕಾ ಕ್ರಮಗಳನ್ನು ಮತ್ತಷ್ಟು ಬಲಪಡಿಸಿದೆ. ಅಂತರ್ಜಲ ಸಂರಕ್ಷಣೆ, ಬೋರ್‌ವೆಲ್ ಮರುಪೂರಣ, ಜಲ ಸಂರಕ್ಷಣೆ ಹಾಗೂ ಬರನಿರೋಧಕ ಬೆಳೆಗಳಿಗೆ ಆದ್ಯತೆ ನೀಡುವ ಸಮಗ್ರ ಕಾರ್ಯತಂತ್ರವನ್ನು ಜಾರಿಗೆ ತರಲಾಗಿದೆ.

ಭಾರತೀಯ ರಾಷ್ಟ್ರೀಯ ಸಾಗರ ಮಾಹಿತಿ ಸೇವೆಗಳ ಕೇಂದ್ರ (INCOIS) ಅಂದಾಜಿನ ಪ್ರಕಾರ, ಎಲ್ ನೀನೋ ಪರಿಣಾಮ 2027ರ ಮೇ ತಿಂಗಳವರೆಗೆ ಮುಂದುವರಿಯುವ ಸಾಧ್ಯತೆ ಇದೆ. ಇದರಿಂದ ತಾಪಮಾನ ಏರಿಕೆ, ಮುಂಗಾರು ಮಳೆ ಕೊರತೆ, ಜಲಾಶಯಗಳಲ್ಲಿ ನೀರಿನ ಮಟ್ಟ ಕುಸಿತ ಹಾಗೂ ಕೃಷಿ ಉತ್ಪಾದನೆ ಮೇಲೆ ಪ್ರತಿಕೂಲ ಪರಿಣಾಮ ಉಂಟಾಗುವ ಆತಂಕ ವ್ಯಕ್ತವಾಗಿದೆ.

ಈ ಹಿನ್ನೆಲೆಯಲ್ಲಿ ರಾಜ್ಯದ ಸುಮಾರು 37 ಲಕ್ಷ ಬೋರ್‌ವೆಲ್‌ಗಳ ಮಾಹಿತಿಯನ್ನು ಓ-ಎಐಖ ಪೋರ್ಟಲ್‌ನಲ್ಲಿ ದಾಖಲಿಸುವ



ಕಾರ್ಯ ನಡೆಯುತ್ತಿದೆ. ಬೋರ್‌ವೆಲ್‌ಗಳ ಮರುಪೂರಣ, ತಾಂತ್ರಿಕ ಪರಿಶೀಲನೆ ಹಾಗೂ ದುರಸ್ತಿ ಕಾರ್ಯಗಳಿಗೆ ವಿಶೇಷ ತರಬೇತಿ ನೀಡಲಾಗುತ್ತಿದ್ದು, ಪ್ರತಿ 15 ದಿನಗಳಿಗೊಮ್ಮೆ ಪ್ರಗತಿ ಪರಿಶೀಲನೆ ನಡೆಸಲಾಗುತ್ತಿದೆ. ಅಂತರ್ಜಲ ತೀವ್ರವಾಗಿ ಕುಸಿದಿರುವ ಪ್ರದೇಶಗಳಲ್ಲಿ ಹೊಸ ಬೋರ್‌ವೆಲ್‌ಗಳ ಕೊರೆತಕ್ಕೂ ನಿರ್ಬಂಧ



> **ಹವಾಮಾನ ವೈಪರೀತ್ಯದ ಸವಾಲನ್ನು ಎದುರಿಸಲು ನೀರಿನ ಸಂರಕ್ಷಣೆ, ಅಂತರ್ಜಲ ರಕ್ಷಣೆ ಹಾಗೂ ಸಾರ್ವಜನಿಕರ ಸಹಭಾಗಿತ್ವ ಅತ್ಯಗತ್ಯ. ಸರ್ಕಾರದ ಜಲ ಸಂರಕ್ಷಣಾ ಅಭಿಯಾನಕ್ಕೆ ಎಲ್ಲರೂ ಕೈಜೋಡಿಸಬೇಕು.**
> **- ಡಾ. ಶಾಲಿನಿ ರಜನೀಶ್,**
> ಮುಖ್ಯ ಕಾರ್ಯದರ್ಶಿ

ಹೇರಲಾಗಿದೆ.

ಗ್ರಾಮೀಣ ಪ್ರದೇಶಗಳಲ್ಲಿ ಟಿಆಕ್ಕಅಖಎ ಯೋಜನೆಯಡಿ ಮಳೆನೀರು ಸಂಗ್ರಹಣೆ, ಚೆಕ್ ಡ್ಯಾಂ ನಿರ್ಮಾಣ ಹಾಗೂ ಸಾಂಪ್ರದಾಯಿಕ ಜಲಮೂಲಗಳ ಪುನರುಜ್ಜೀವನಕ್ಕೆ ಆದ್ಯತೆ ನೀಡಲಾಗಿದೆ. ಸಂಸ್ಕರಿಸಿದ ತ್ಯಾಜ್ಯ ನೀರನ್ನು ಕೈಗಾರಿಕೆ, ಉದ್ಯಾನ ಹಾಗೂ ನಿರ್ಮಾಣ ಕಾಮಗಾರಿಗಳಿಗೆ ಮರುಬಳಕೆ ಮಾಡುವ ವ್ಯವಸ್ಥೆಯನ್ನೂ ಜಾರಿಗೆ ತರಲಾಗುತ್ತಿದೆ. ಸ್ಥಳೀಯ ಸಂಸ್ಥೆಗಳ ಮಟ್ಟದಲ್ಲಿ ಟಿಜಲ ಆಯವ್ಯಯಟಿ (Water Budgeting) ವ್ಯವಸ್ಥೆಯನ್ನೂ ಅನುಷ್ಠಾನಗೊಳಿಸಲಾಗುತ್ತಿದೆ.

ರೈತರು ಕಡಿಮೆ ನೀರಿನಲ್ಲಿ ಬೆಳೆಯಬಹುದಾದ ಹಾಗೂ ಬರವನ್ನು ತಡೆದುಕೊಳ್ಳುವ ಜೋಳ, ರಾಗಿ, ಶೇಂಗಾ, ಕಡಲೆ, ತೊಗರಿ, ಅಲಸಂದಿ, ಸೂರ್ಯಕಾಂತಿ, ಎಳ್ಳು ಸೇರಿದಂತೆ ವಿವಿಧ ಬೆಳೆಗಳನ್ನು ಬೆಳೆಯುವಂತೆ ಸರ್ಕಾರ ಸಲಹೆ ನೀಡಿದೆ.

**ಎಲ್ ನೀನೋ ಪರಿಣಾಮದ ಸಾಧ್ಯತೆಗಳು**

1. ತಾಪಮಾನದಲ್ಲಿ ಹೆಚ್ಚಳ
2. ಮುಂಗಾರು ಮಳೆ ಕೊರತೆ
3. ಜಲಾಶಯಗಳಲ್ಲಿ ನೀರಿನ ಮಟ್ಟ ಇಳಿಕೆ
4. ಕೃಷಿ ಉತ್ಪಾದನೆ ಕುಸಿತ

**ಸರ್ಕಾರದ ಪ್ರಮುಖ ಕ್ರಮಗಳು**

1. 37 ಲಕ್ಷ ಬೋರ್‌ವೆಲ್‌ಗಳ ಡಿಜಿಟಲ್ ನೋಂದಣಿ
2. ಬೋರ್‌ವೆಲ್ ರೀಚಾರ್ಜ್‌ಗೆ ಒತ್ತು
3. ಚೆಕ್‌ಡ್ಯಾಂ ಹಾಗೂ ಮಳೆನೀರು ಸಂಗ್ರಹಣೆ
4. ಜಲ ಆಯವ್ಯಯ (Water Budgeting)
5. ಬರನಿರೋಧಕ ಬೆಳೆಗಳಿಗೆ ಉತ್ತೇಜನ

### ನಾಗಾವಿಯಲ್ಲಿ ಡೆಂಗ್ಯೂ ವಿರೋಧಿ ಮಾಸಾಚರಣೆ | ಶಾಲಾ ಮಕ್ಕಳಿಗೆ ಜಾಗೃತಿ ಕಾರ್ಯಕ್ರಮ

# ಡೆಂಗ್ಯೂಗೆ ಮುಂಜಾಗ್ರತೆಯೇ ಪರಮೌಷಧಿ



**ವಿಜಯಸಾಕ್ಷಿ ಸುದ್ದಿ, ಗದಗ**

ಡೆಂಗ್ಯೂ ಜ್ವರಕ್ಕೆ ನಿರ್ದಿಷ್ಟ ಚಿಕಿತ್ಸೆ ಇಲ್ಲ. ಹೀಗಾಗಿ ಸೊಳ್ಳೆಗಳ ಉತ್ಪತ್ತಿ ತಡೆಗಟ್ಟುವ ಮೂಲಕ ಮುಂಜಾಗ್ರತೆ ವಹಿಸುವುದೇ ಅತ್ಯುತ್ತಮ ರಕ್ಷಣೆಯಾಗಿದೆ ಎಂದು ಉಪ ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಎಸ್.ಡಿ. ಬೆನ್ನೂರ ಹೇಳಿದರು. ಗದಗ ತಾಲೂಕಿನ ನಾಗಾವಿ ಪ್ರಾಥಮಿಕ ಆರೋಗ್ಯ ಕೇಂದ್ರ ವ್ಯಾಪ್ತಿಯ ನಾಗಾವಿ ಉನ್ನತೀಕರಿಸಿದ ಸರ್ಕಾರಿ ಪ್ರೌಢಶಾಲೆಯಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ರೋಗವಾಹಕ ಆಶ್ರಿತ ರೋಗಗಳ ನಿಯಂತ್ರಣಾಧಿಕಾರಿಗಳ ಕಚೇರಿ ಹಾಗೂ ಜಿಲ್ಲಾ ಐಇಸಿ ವಿಭಾಗದ ಆಶ್ರಯದಲ್ಲಿ ಆಯೋಜಿಸಿದ್ದ ಡೆಂಗ್ಯೂ ವಿರೋಧಿ ಮಾಸಾಚರಣೆ ಜಾಗೃತಿ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಪರಿಶೀಲಿಸಿ, ಸ್ವಚ್ಛಗೊಳಿಸಿ ಹಾಗೂ ಮುಚ್ಚಿಡಿ ಎಂಬ ಘೋಷವಾಕ್ಯದೊಂದಿಗೆ ಡೆಂಗ್ಯೂ ವಿರೋಧಿ ಮಾಸಾಚರಣೆ ಆಚರಿಸಲಾಗುತ್ತಿದೆ. ಮನೆಗಳಲ್ಲಿ ನೀರು ಸಂಗ್ರಹಿಸುವ ಪಾತ್ರೆಗಳನ್ನು ನಿಯಮಿತವಾಗಿ ಪರಿಶೀಲಿಸಿ, ಸೊಳ್ಳೆ ಮರಿಗಳು ಕಂಡುಬಂದರೆ ಸ್ವಚ್ಛಗೊಳಿಸಿ, ನೀರಿನ ಪಾತ್ರೆಗಳನ್ನು ಭದ್ರವಾಗಿ ಮುಚ್ಚಿಡಬೇಕು ಎಂದು ತಿಳಿಸಿದರು.

ನಿಂತ ಸ್ವಚ್ಛ ನೀರಿನಲ್ಲಿ ಈಡಿಸ್ ಸೊಳ್ಳೆಗಳು ಹೆಚ್ಚಾಗಿ ಬೆಳೆಯುತ್ತವೆ. ಮನೆಯೊಳಗಿನ ಅಲಂಕಾರಿಕ ಗಿಡಗಳ ಕುಂಡಗಳು, ಹಳೆಯ ಟೈರ್, ಪಾತ್ರೆಗಳು, ಮಡಿಕೆಗಳು, ಪ್ಲಾಸ್ಟಿಕ್ ವಸ್ತುಗಳು, ಫ್ರಿಜ್ ಟ್ರೇ ಹಾಗೂ ಇತರ ಪಾತ್ರೆಗಳಲ್ಲಿ ನೀರು ನಿಲ್ಲದಂತೆ ಎಚ್ಚರ ವಹಿಸಬೇಕು. ವಾರಕ್ಕೊಮ್ಮೆ ಟಿಡ್ರೈ ಡೇಟಿ ಆಚರಿಸಿ ಸೊಳ್ಳೆಗಳ ಉತ್ಪತ್ತಿ ತಡೆಯುವುದು ಪ್ರತಿಯೊಬ್ಬರ ಜವಾಬ್ದಾರಿಯಾಗಿದೆ ಎಂದು ಹೇಳಿದರು. ಕಾರ್ಯಕ್ರಮದಲ್ಲಿ ಸೊಳ್ಳೆಗಳ ಬೆಳವಣಿಗೆಯ ಹಂತಗಳ ಕುರಿತು ಮಾಹಿತಿ ನೀಡಿ ಕರಪತ್ರಗಳನ್ನು ವಿತರಿಸಿ ವಿದ್ಯಾರ್ಥಿಗಳಲ್ಲಿ ಜಾಗೃತಿ ಮೂಡಿಸಲಾಯಿತು.

ಆರೋಗ್ಯ ನಿರೀಕ್ಷಣಾಧಿಕಾರಿ ಎಸ್.ಸಿ. ಕರಡಿಗುಡ್ಡ ಮಾತನಾಡಿ, ಡೆಂಗ್ಯೂ ಜ್ವರದ ಲಕ್ಷಣಗಳು, ಸ್ವಯಂ ರಕ್ಷಣಾ ಕ್ರಮಗಳು ಹಾಗೂ ಕಲುಷಿತ ಆಹಾರ ಮತ್ತು ನೀರಿನಿಂದ ಹರಡುವ ಕಾಯಿಲೆಗಳ ಬಗ್ಗೆ ವಿದ್ಯಾರ್ಥಿಗಳಿಗೆ ಮಾಹಿತಿ ನೀಡಿದರು.

ಕಾರ್ಯಕ್ರಮದಲ್ಲಿ ಮುಖ್ಯ ಶಿಕ್ಷಕಿ ಜೆ.ಆರ್. ಏಕಬೋಟೆ, ಸಹ ಶಿಕ್ಷಕಿಯರಾದ ಎ.ಎ. ಬಂಡಿವಾಡಮಠ, ಜೆ.ಎಂ. ಮುತ್ತಿನಪೆಂಡಿಮಠ, ಎಂ.ಎಂ. ಬಾಗಲಿ, ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ಎಸ್.ಎಲ್. ಹ್ಯಬೀಬ ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

> **ಡೆಂಗ್ಯೂಗೆ ನಿರ್ದಿಷ್ಟ ಚಿಕಿತ್ಸೆ ಇಲ್ಲ. ಸೊಳ್ಳೆಗಳ ಉತ್ಪತ್ತಿ ತಡೆಗಟ್ಟುವ ಮುಂಜಾಗ್ರತೆಯೇ ಡೆಂಗ್ಯೂ ನಿಯಂತ್ರಣದ ಅತ್ಯುತ್ತಮ ಮಾರ್ಗ.**
> **- ಎಸ್.ಡಿ. ಬೆನ್ನೂರ,**
> ಉಪ ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ

## ಬಿಬಿಎ ಪರೀಕ್ಷೆಯಲ್ಲಿ ಮನೋರಮಾ ಕಾಲೇಜು ವಿದ್ಯಾರ್ಥಿಗಳ ಸಾಧನೆ



**ವಿಜಯಸಾಕ್ಷಿ ಸುದ್ದಿ, ಗದಗ**

ನಗರದ ಮನೋರಮಾ ಮಹಾವಿದ್ಯಾಲಯದ ಬಿಬಿಎ (BBA) ವಿಭಾಗದ 2025-26ನೇ ಶೈಕ್ಷಣಿಕ ಸಾಲಿನ ಆರನೇ ಸೆಮಿಸ್ಟರ್ ಪರೀಕ್ಷೆಯಲ್ಲಿ ವಿದ್ಯಾರ್ಥಿಗಳು ಉತ್ತಮ ಸಾಧನೆ ಮಾಡಿ ಕಾಲೇಜಿಗೆ ಕೀರ್ತಿ ತಂದಿದ್ದಾರೆ.

ಕುಮಾರಿ ಪೂರ್ಣಿಮಾ ಮಲ್ಲಾಪೂರ 551 ಅಂಕಗಳನ್ನು ಪಡೆದು ಪ್ರಥಮ ಸ್ಥಾನ, ಕುಮಾರ ಶ್ರೀನಿವಾಸರೆಡ್ಡಿ ಸಾಸ್ವಿಹಳ್ಳಿ 532 ಅಂಕಗಳೊಂದಿಗೆ ದ್ವಿತೀಯ ಸ್ಥಾನ, ಕುಮಾರಿ ವಿದ್ಯಶ್ರೀ ಡಾವಣಗೇರಿ 527 ಅಂಕಗಳೊಂದಿಗೆ ತೃತೀಯ ಸ್ಥಾನ ಹಾಗೂ ಕುಮಾರ ಪುನೀತ ಪಟೇಲ 506 ಅಂಕಗಳನ್ನು ಪಡೆದು ನಾಲ್ಕನೇ ಸ್ಥಾನ ಗಳಿಸಿದ್ದಾರೆ.

ವಿದ್ಯಾರ್ಥಿಗಳ ಈ ಸಾಧನೆಯನ್ನು ಸಂಸ್ಥೆಯ ಅಧ್ಯಕ್ಷ ಎನ್.ಎಂ. ಕುಡತರಕರ, ಪ್ರಾಚಾರ್ಯ ಬಿ.ಎಸ್. ಹಿರೇಮಠ, ಆಡಳಿತಾಧಿಕಾರಿ ಕಿಶೋರ ಮುದಗಲ್ಲ, ನಿರ್ದೇಶಕರಾದ ಮಂಜುನಾಥ ಕುಡತರಕರ, ಸಂಜಯಕುಮಾರ ಕುಡತರಕರ, ಚೇತನ ಕುಡತರಕರ ಹಾಗೂ ಮಹಾವಿದ್ಯಾಲಯದ ಬೋಧಕ ಮತ್ತು ಬೋಧಕೇತರ ಸಿಬ್ಬಂದಿ ಅಭಿನಂದಿಸಿ, ಮುಂದಿನ ವಿದ್ಯಾಭ್ಯಾಸದಲ್ಲಿಯೂ ಇದೇ ರೀತಿಯ ಸಾಧನೆ ಮುಂದುವರಿಯಲಿ ಎಂದು ಶುಭ ಹಾರೈಸಿದ್ದಾರೆ.

## ಬಿ.ಕಾಂ ಪರೀಕ್ಷೆಯಲ್ಲಿ ಮನೋರಮಾ ಕಾಲೇಜು ವಿದ್ಯಾರ್ಥಿಗಳ ಸಾಧನೆ



**ವಿಜಯಸಾಕ್ಷಿ ಸುದ್ದಿ, ಗದಗ**

ನಗರದ ಮನೋರಮಾ ಮಹಾವಿದ್ಯಾಲಯದ ಬಿ.ಕಾಂ (B.Com) ವಿಭಾಗದ 2025-26ನೇ ಶೈಕ್ಷಣಿಕ ಸಾಲಿನ ಆರನೇ ಸೆಮಿಸ್ಟರ್ ಪರೀಕ್ಷೆಯಲ್ಲಿ ವಿದ್ಯಾರ್ಥಿಗಳು ಅತ್ಯುತ್ತಮ ಸಾಧನೆ ಮಾಡಿ ಕಾಲೇಜಿಗೆ ಕೀರ್ತಿ ತಂದಿದ್ದಾರೆ. ಕುಮಾರಿ ಸಂಜನಾ ಅಕ್ಷಯ ಕುರಾ 675 ಅಂಕಗಳನ್ನು ಪಡೆದು ಪ್ರಥಮ ಸ್ಥಾನ ಪಡೆದಿದ್ದು, ಐಟಿಆರ್ (ಐಕ್ಕ) ವಿಷಯದಲ್ಲಿ 100ಕ್ಕೆ 100 ಅಂಕ ಗಳಿಸಿ ವಿಶೇಷ ಸಾಧನೆ ಮಾಡಿದ್ದಾರೆ. ಕುಮಾರಿ ಸಂಧ್ಯಾ ಗಜಕೋಶ ಹಾಗೂ ಕುಮಾರಿ ಶ್ರಾವಣಿ ಖಾನಾಪೂರ ತಲಾ 657 ಅಂಕಗಳನ್ನು ಪಡೆದು ದ್ವಿತೀಯ ಸ್ಥಾನ ಪಡೆದಿದ್ದಾರೆ. ಇವರಲ್ಲಿ ಸಂಧ್ಯಾ ಗಜಕೋಶ ಅವರು ಸರ್ವೀಸ್ ಮಾರ್ಕೆಟಿಂಗ್ ವಿಷಯದಲ್ಲಿ 100ಕ್ಕೆ 100 ಅಂಕ ಗಳಿಸಿ ಗಮನ ಸೆಳೆದಿದ್ದಾರೆ.

ಕುಮಾರಿ ಮಧು ಹಾದಿಮನಿ 656 ಅಂಕಗಳೊಂದಿಗೆ ತೃತೀಯ ಸ್ಥಾನ ಪಡೆದರೆ, ಕುಮಾರಿ ಸುನೈನಾ ಕಡಕೋಳ 653 ಅಂಕಗಳೊಂದಿಗೆ ನಾಲ್ಕನೇ ಸ್ಥಾನ ಪಡೆದಿದ್ದಾರೆ. ಸುನೈನಾ ಅವರು ಕೂಡ ಸರ್ವೀಸ್ ಮಾರ್ಕೆಟಿಂಗ್ ವಿಷಯದಲ್ಲಿ 100ಕ್ಕೆ 100 ಅಂಕ ಗಳಿಸಿ ವಿಶೇಷ ಸಾಧನೆ ಮಾಡಿದ್ದಾರೆ. ವಿದ್ಯಾರ್ಥಿಗಳ ಈ ಸಾಧನೆಯನ್ನು ಸಂಸ್ಥೆಯ ಅಧ್ಯಕ್ಷ ಎನ್.ಎಂ. ಕುಡತರಕರ, ಪ್ರಾಚಾರ್ಯ ಬಿ.ಎಸ್. ಹಿರೇಮಠ, ಆಡಳಿತಾಧಿಕಾರಿ ಕಿಶೋರ ಮುದಗಲ್ಲ, ನಿರ್ದೇಶಕರಾದ ಮಂಜುನಾಥ ಕುಡತರಕರ, ಸಂಜಯಕುಮಾರ ಕುಡತರಕರ, ಚೇತನ ಕುಡತರಕರ ಹಾಗೂ ಮಹಾವಿದ್ಯಾಲಯದ ಬೋಧಕ ಮತ್ತು ಬೋಧಕೇತರ ಸಿಬ್ಬಂದಿ ಅಭಿನಂದಿಸಿ, ಶುಭ ಹಾರೈಸಿದ್ದಾರೆ.

### ಗದಗದಲ್ಲಿ ಆಷಾಢ ಮಾಸದ ಧರ್ಮ ಸಮಾರಂಭ ಸಮಾರೋಪದಲ್ಲಿ ರಂಭಾಪುರಿ ಶ್ರೀಗಳು

# ಗುರಿ-ಗುರುವೇ ಬದುಕಿನ ಯಶಸ್ಸಿನ ಸೂತ್ರ



**ವಿಜಯಸಾಕ್ಷಿ ಸುದ್ದಿ, ಗದಗ**

ಮಾನವ ಜೀವನ ಸಾರ್ಥಕವಾಗಬೇಕಾದರೆ ಗುರಿ ಮತ್ತು ಗುರು ಅತ್ಯಗತ್ಯ. ಗುರಿಯಿಲ್ಲದ ಹಾಗೂ ಗುರು ಇಲ್ಲದ ಜೀವನ ನಿರರ್ಥಕವಾಗುತ್ತದೆ ಎಂದು ಬಾಳೆಹೊನ್ನೂರಿನ ಶ್ರೀ ರಂಭಾಪುರಿ ಪೀಠದ ಡಾ. ವೀರಸೋಮೇಶ್ವರ ಜಗದ್ಗುರು ಹೇಳಿದರು.

ನಗರದ ಶ್ರೀ ಜಗದ್ಗುರು ಪಂಚಾಚಾರ್ಯ ಮಾಂಗಲ್ಯ ಮಂದಿರದಲ್ಲಿ ನಡೆದ ಶ್ರೀಕಾಶಿ ಜಗದ್ಗುರುಗಳ ಆಷಾಢ ಮಾಸದ ಪೂಜಾ ಹಾಗೂ ಜನಜಾಗೃತಿ ಧರ್ಮ ಸಮಾರಂಭದ ಸಮಾರೋಪ ಸಮಾರಂಭದಲ್ಲಿ ಆಶೀರ್ವಚನ ನೀಡಿದ ಅವರು, ಮಾನವ ಜೀವನವು ಬಹುಜನ್ಮಗಳ ಪುಣ್ಯಫಲದಿಂದ ದೊರೆತ ಅಮೂಲ್ಯ ಅವಕಾಶವಾಗಿದೆ. ಈ ಬದುಕನ್ನು ಸಾರ್ಥಕಗೊಳಿಸಲು ಧರ್ಮ, ಗುರು ಹಾಗೂ ಸ್ಪಷ್ಟ ಗುರಿ ಅಗತ್ಯವೆಂದರು.

ಹೊತ್ತ ಭೂಮಿ ಮತ್ತು ಹೆತ್ತ ತಾಯಿ ಎಷ್ಟು ಮುಖ್ಯವೋ, ಮನುಷ್ಯನ ಬದುಕಿಗೆ ಧರ್ಮವೂ ಅಷ್ಟೇ ಮುಖ್ಯ. ಅಸತ್ಯದಿಂದ ಸತ್ಯದತ್ತ, ಕತ್ತಲೆಯಿಂದ ಬೆಳಕಿನತ್ತ ಹಾಗೂ ಮರಣದಿಂದ ಅಮರತ್ವದತ್ತ ಕರೆದೊಯ್ಯುವ ಮಾರ್ಗವೇ ಧರ್ಮವಾಗಿದೆ. ಸೂರ್ಯ ಮತ್ತು ಚಂದ್ರರು ಕಾಲಕ್ಕೆ ತಕ್ಕಂತೆ ಬೆಳಕು ನೀಡುತ್ತಾರೆ. ಆದರೆ ಸರ್ವಕಾಲಕ್ಕೂ, ಸರ್ವ ಸಮಾಜಕ್ಕೂ ಬೆಳಕು ನೀಡುವುದು ಧರ್ಮವೊಂದೇ ಎಂದು ಹೇಳಿದರು. ಶ್ರೀ ಜಗದ್ಗುರು ರೇಣುಕಾಚಾರ್ಯರು ಬೋಧಿಸಿದ ಅಹಿಂಸೆ ಸೇರಿದಂತೆ ದಶಧರ್ಮ ಸೂತ್ರಗಳು ಮನುಷ್ಯನ ಬದುಕಿಗೆ ದಾರಿದೀಪವಾಗಿವೆ. ಗದಗದಲ್ಲಿ ಆಷಾಢ ಮಾಸದ ಅಂಗವಾಗಿ ಐದು ದಿನಗಳ ಕಾಲ ಸಂಗೀತಯುಕ್ತ ಇಷ್ಟಲಿಂಗ ಮಹಾಪೂಜೆ ಹಾಗೂ ಸಿದ್ಧಾಂತ ಶಿಖಾಮಣಿ ಪ್ರವಚನಗಳನ್ನು ಆಯೋಜಿಸಿ ಜನಜಾಗೃತಿ ಮೂಡಿಸಿರುವುದು ಸಂತಸದ ಸಂಗತಿ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಸಾನ್ನಿಧ್ಯ ವಹಿಸಿದ್ದ ಶ್ರೀಮತ್ ಕಾಶಿ ಡಾ. ಮಲ್ಲಿಕಾರ್ಜುನ ವಿಶ್ವಾರಾಧ್ಯ ಜಗದ್ಗುರು ಮಾತನಾಡಿ, ಭೌತಿಕ ಸಂಪತ್ತಿಗಿಂತ ಆಧ್ಯಾತ್ಮಿಕ ಸಂಪತ್ತೇ ಶ್ರೇಷ್ಠ. ಆಧ್ಯಾತ್ಮಿಕ ಜ್ಞಾನದಿಂದಲೇ ಮನುಷ್ಯನಿಗೆ ನಿಜವಾದ ಶಾಂತಿ ಮತ್ತು ನೆಮ್ಮದಿ ದೊರೆಯುತ್ತದೆ ಎಂದರು.

ನರೇಗಲ್ಲ ಹಿರೇಮಠದ ಮಲ್ಲಿಕಾರ್ಜುನ ಶಿವಾಚಾರ್ಯ ಸ್ವಾಮೀಜಿ ಪ್ರಾಸ್ತಾವಿಕವಾಗಿ ಮಾತನಾಡಿ, ಹುಟ್ಟು-ಸಾವುಗಳ ನಡುವಿನ ಬದುಕನ್ನು ಸಾರ್ಥಕಗೊಳಿಸಿಕೊಳ್ಳುವುದೇ ಮಾನವನ ಗುರಿಯಾಗಬೇಕು. ಈ ನಿಟ್ಟಿನಲ್ಲಿ ಶ್ರೀ ಜಗದ್ಗುರು ರೇಣುಕಾಚಾರ್ಯರ ತತ್ವ-ಸಿದ್ಧಾಂತಗಳು ಆಶಾಕಿರಣವಾಗಿವೆ ಎಂದು ಹೇಳಿದರು.

ಅಧ್ಯಕ್ಷತೆ ವಹಿಸಿದ್ದ ಸೂಡಿ ಜುಕ್ತಿ ಹಿರೇಮಠದ ಡಾ. ಕೊಟ್ಟೂರು ಬಸವೇಶ್ವರ ಶಿವಾಚಾರ್ಯ ಸ್ವಾಮೀಜಿ ಮಾತನಾಡಿ, ವೀರಶೈವ ಧರ್ಮದ ಇತಿಹಾಸ ಅತ್ಯಂತ ಪ್ರಾಚೀನವಾಗಿದ್ದು, ಸಮಾನತೆ ಹಾಗೂ ಮಾನವೀಯ ಮೌಲ್ಯಗಳನ್ನು ಸಾರುವ ಧರ್ಮವಾಗಿದೆ. ಮಾತು, ಮನಸ್ಸು ಮತ್ತು ಕೃತಿಯಲ್ಲಿ ಏಕತೆ ಸಾಧಿಸಿ ಬದುಕುವ ಸಂದೇಶವನ್ನು ಸಿದ್ಧಾಂತ ಶಿಖಾಮಣಿ ನೀಡುತ್ತದೆ ಎಂದು ತಿಳಿಸಿದರು.

ಅಡ್ನೂರು ಹಿರೇಮಠದ ಅಭಿನವ ಪಂಚಾಕ್ಷರ ಶಿವಾಚಾರ್ಯ ಸ್ವಾಮೀಜಿ ಉಪಸ್ಥಿತರಿದ್ದರು. ಈ ಸಂದರ್ಭದಲ್ಲಿ ಹಲವಾರು ಗಣ್ಯರು ಹಾಗೂ ದಾನಿಗಳನ್ನು ಉಭಯ ಜಗದ್ಗುರುಗಳು ಗೌರವಿಸಿ ಆಶೀರ್ವದಿಸಿದರು.

ಗಾನಭೂಷಣ ವೀರೇಶ ಕಿತ್ತೂರು ಸಂಗೀತ ಸೇವೆ ಸಲ್ಲಿಸಿದರು. ಮಂಜುನಾಥ ಬೇಲೇರಿ ಸ್ವಾಗತಿಸಿದರು. ಚಂದ್ರು ಬಾಳಿಹಳ್ಳಿಮಠ ಕಾರ್ಯಕ್ರಮ ನಿರ್ವಹಿಸಿದರು. ಬಳಿಕ ಅನ್ನದಾಸೋಹ ನಡೆಯಿತು.

> **ಮಾನವ ಜೀವನ ಸಾಫಲ್ಯಗೊಳ್ಳಬೇಕಾದರೆ ಗುರಿ ಮತ್ತು ಗುರು ಎರಡೂ ಅತ್ಯಗತ್ಯ. ಗುರಿಯಿಲ್ಲದ ಹಾಗೂ ಗುರು ಇಲ್ಲದ ಜೀವನ ನಿರರ್ಥಕ.**
> **- ಡಾ. ವೀರಸೋಮೇಶ್ವರ ಜಗದ್ಗುರು,**
> ಶ್ರೀ ರಂಭಾಪುರಿ ಪೀಠ, ಬಾಳೆಹೊನ್ನೂರು

### ಹಿರೇಹಾಳದ ಭೀಮವ್ವ ತೇಲಿ ನಿಧನದ ಬಳಿಕ ಕುಟುಂಬದಿಂದ ನೇತ್ರದಾನ, ದೇಹದಾನ; ಮಾನವೀಯತೆಗೆ ಮಾದರಿ

# ನೇತ್ರದಾನದಿಂದ ಇಬ್ಬರ ಬದುಕಿಗೆ ಬೆಳಕು

**ವಿಜಯಸಾಕ್ಷಿ ಸುದ್ದಿ, ಗದಗ**

ಸಾವಿನಲ್ಲೂ ಸಾರ್ಥಕತೆ ಮೆರೆದ ರೋಣ ತಾಲೂಕಿನ ಹಿರೇಹಾಳ ಗ್ರಾಮದ 85 ವರ್ಷದ ಭೀಮವ್ವ ಶಂಕ್ರಪ್ಪ ತೇಲಿ ಅವರು ನೇತ್ರದಾನ ಹಾಗೂ ದೇಹದಾನದ ಮೂಲಕ ಮಾನವೀಯತೆಯ ಅಪರೂಪದ ಮಾದರಿಯಾಗಿದ್ದಾರೆ. ಜುಲೈ 19ರಂದು ಭೀಮವ್ವ ತೇಲಿ ನಿಧನರಾದ ನಂತರ, ಪತ್ನಿಯ ಅಗಲಿಕೆಯ ದುಃಖದಲ್ಲಿದ್ದರೂ ಅವರ ಪತಿ ಹಾಗೂ ಕುಟುಂಬ ಸದಸ್ಯರು ಮಾನವೀಯ ಮೌಲ್ಯಗಳನ್ನು ಮೆರೆದು ಗದಗ-ಬೆಟಗೇರಿ ಲಯನ್ಸ್ ಕ್ಲಬ್ ಪದಾಧಿಕಾರಿಗಳನ್ನು ಸಂಪರ್ಕಿಸಿ ನೇತ್ರದಾನಕ್ಕೆ ಮುಂದಾದರು. ಕುಟುಂಬದ ಒಪ್ಪಿಗೆಯ ಮೇರೆಗೆ ಬಾಗಲಕೋಟೆಯ ಬಿ.ವಿ.ವಿ. ನೇತ್ರ ಭಂಡಾರ ಮತ್ತು ಪಾರದರ್ಶಕ ಪಟಲ ಜೋಡಣಾ ಕೇಂದ್ರದ ತಜ್ಞರ ತಂಡ ನೇತ್ರಗಳನ್ನು ಯಶಸ್ವಿಯಾಗಿ ಸಂಗ್ರಹಿಸಿತು. ಅಲ್ಲದೆ ಮೃತದೇಹವನ್ನು ವೈದ್ಯಕೀಯ ವಿದ್ಯಾರ್ಥಿಗಳ ಅಂಗರಚನಾ ಶಾಸ್ತ್ರ ಅಧ್ಯಯನಕ್ಕಾಗಿ ದೇಹದಾನ ಮಾಡಲಾಯಿತು.

ಭೀಮವ್ವ ತೇಲಿ ಅವರ ನೇತ್ರದಾನದಿಂದ ಇಬ್ಬರು ಅಂಧರಿಗೆ ದೃಷ್ಟಿ ಭಾಗ್ಯ ದೊರೆತಿದ್ದು, ಅವರ ಕುಟುಂಬದ ಈ ನಿರ್ಧಾರಕ್ಕೆ ಸಮಾಜದಿಂದ ವ್ಯಾಪಕ ಮೆಚ್ಚುಗೆ ವ್ಯಕ್ತವಾಗಿದೆ.

ಬಿ.ವಿ.ವಿ. ನೇತ್ರ ಭಂಡಾರದ ವ್ಯವಸ್ಥಾಪಕರು, ದಾನಿಗಳ ಕುಟುಂಬದ ಮಾನವೀಯ ನಿರ್ಧಾರವನ್ನು ಶ್ಲಾಘಿಸಿ, ಮೃತರ ಆತ್ಮಕ್ಕೆ ಚಿರಶಾಂತಿ ಸಿಗಲಿ ಎಂದು ಸಂತಾಪ ಸೂಚಿಸಿದ್ದಾರೆ. ರಾಜ್ಯದಲ್ಲಿ ಸಾವಿರಾರು ಮಂದಿ ಕಾರ್ನಿಯಾ ಕಸಿಗಾಗಿ ಕಾಯುತ್ತಿದ್ದು, ನೇತ್ರದಾನದ ಕೊರತೆಯಿಂದ ಅವರಿಗೆ ದೃಷ್ಟಿ ಭಾಗ್ಯ ಸಿಗುತ್ತಿಲ್ಲ. ಮರಣದ ನಂತರ ಆರು ಗಂಟೆಯೊಳಗೆ ನೇತ್ರದಾನ ಮಾಡಬಹುದಾಗಿದ್ದು, ಇದು ಕೇವಲ 15 ನಿಮಿಷಗಳ ಸರಳ ಪ್ರಕ್ರಿಯೆಯಾಗಿದೆ. ಇದರಿಂದ ಮೃತರ ಮುಖದ ಆಕಾರಕ್ಕೆ ಯಾವುದೇ ಹಾನಿಯಾಗುವುದಿಲ್ಲ ಎಂದು ಗದಗ-ಬೆಟಗೇರಿ ಲಯನ್ಸ್ ಕ್ಲಬ್ ತಿಳಿಸಿದೆ. ನೇತ್ರದಾನ ಅಥವಾ ದೇಹದಾನಕ್ಕೆ ಆಸಕ್ತ ಕುಟುಂಬಗಳು ಹೆಚ್ಚಿನ ಮಾಹಿತಿಗಾಗಿ ಗದಗ-ಬೆಟಗೇರಿ ಲಯನ್ಸ್ ಕ್ಲಬ್ ಅನ್ನು ಸಂಪರ್ಕಿಸುವಂತೆ ರಮೇಶ ಶಿಗ್ಲಿ ಮನವಿ ಮಾಡಿದ್ದಾರೆ.

## ಸಂಕ್ಷಿಪ್ತ ಸುದ್ದಿಗಳು

# ಕಲಾ ಸಂಘ-ಸಂಸ್ಥೆಗಳಿಗೆ ಧನಸಹಾಯಕ್ಕೆ ಅರ್ಜಿ ಆಹ್ವಾನ

**ವಿಜಯಸಾಕ್ಷಿ ಸುದ್ದಿ, ಗದಗ**

ನಾಡಿನ ಭಾಷೆ, ಕಲೆ, ಸಾಹಿತ್ಯ, ಸಂಗೀತ, ಜನಪದ, ನೃತ್ಯ, ನಾಟಕ ಸೇರಿದಂತೆ ವಿವಿಧ ಸಾಂಸ್ಕೃತಿಕ ಚಟುವಟಿಕೆಗಳನ್ನು ಉತ್ತೇಜಿಸುವ ಉದ್ದೇಶದಿಂದ 2026-27ನೇ ಸಾಲಿನ ಧನಸಹಾಯಕ್ಕಾಗಿ ನೋಂದಾಯಿತ ಸಂಘ-ಸಂಸ್ಥೆಗಳು ಹಾಗೂ ಕಲಾವಿದರಿಂದ ಆನ್‌ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ವತಿಯಿಂದ ಸಾಮಾನ್ಯ, ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡ ಉಪಯೋಜನೆಯಡಿ ನೋಂದಾಯಿತ ಸಂಘ-ಸಂಸ್ಥೆಗಳಿಗೆ ಧನಸಹಾಯ, ಕಲಾವಿದರಿಗೆ ವಾದ್ಯ ಪರಿಕರಗಳು ಹಾಗೂ ವೇಷಭೂಷಣಗಳ ಖರೀದಿಗೆ ಸಹಾಯಧನ ಮತ್ತು ಚಿತ್ರಕಲೆ ಹಾಗೂ ಶಿಲ್ಪಕಲಾ ಪ್ರದರ್ಶನಗಳಿಗೆ ನೆರವು ನೀಡಲಾಗುತ್ತಿದೆ.

ಆಸಕ್ತರು ಜುಲೈ 22ರಿಂದ ಆಗಸ್ಟ್ 20ರವರೆಗೆ ಸೇವಾಸಿಂಧು ಪೋರ್ಟಲ್ ಮೂಲಕ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಬಹುದು.

ಅರ್ಜಿ ಸಲ್ಲಿಸುವ ವಿಧಾನ ಹಾಗೂ ಮಾರ್ಗಸೂಚಿಗಳನ್ನು ಸೇವಾಸಿಂಧು ಮತ್ತು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವೆಬ್‌ಸೈಟ್‌ನಲ್ಲಿ ಪ್ರಕಟಿಸಲಾಗಿದೆ.

ನಿಗದಿತ ಅವಧಿಯ ನಂತರ ಸಲ್ಲಿಸುವ ಅರ್ಜಿಗಳನ್ನು ಯಾವುದೇ ಕಾರಣಕ್ಕೂ ಪರಿಗಣಿಸಲಾಗುವುದಿಲ್ಲ. ಅಲ್ಲದೆ, ಅರ್ಜಿಗಳನ್ನು ಇಲಾಖೆಯಲ್ಲಿ ನೇರವಾಗಿ ಸ್ವೀಕರಿಸುವುದಿಲ್ಲ ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಡಾ. ಬಸವರಾಜ ವಿ. ಬಳ್ಳಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಹೆಚ್ಚಿನ ಮಾಹಿತಿಗಾಗಿ ಇಲಾಖೆಯ ಸಹಾಯವಾಣಿ ಅಥವಾ ಆಯಾ ಜಿಲ್ಲೆಯ ವ್ಯವಸ್ಥಾಪಕರನ್ನು ಕಚೇರಿ ವೇಳೆಯಲ್ಲಿ ಸಂಪರ್ಕಿಸಬಹುದು.

# ಹಾವೇರಿ ಜಿಲ್ಲಾ ಅಧ್ಯಕ್ಷರಾಗಿ ಜುಬೇದಾ ನಾಯಕ ನೇಮಕ

**ವಿಜಯಸಾಕ್ಷಿ ಸುದ್ದಿ, ಗದಗ**



ಹಿರಿಯ ಸಾಹಿತಿ, ಪರಿಸರ ಪ್ರೇಮಿ ಹಾಗೂ ಕ್ರಿಯಾಶೀಲ ಬರಹಗಾರ್ತಿಯಾಗಿರುವ ಶ್ರೀಮತಿ ಜುಬೇದ ನಾಯಕ ಅವರನ್ನು ಕಪ್ಪತ್ತಗಿರಿ ಸಾಹಿತ್ಯ ಶಿಕ್ಷಣ ಸಾಂಸ್ಕೃತಿಕ ಕಲಾ ವೇದಿಕೆಯ ಹಾವೇರಿ ಜಿಲ್ಲಾ ಅಧ್ಯಕ್ಷೆಯಾಗಿ ನೇಮಕ ಮಾಡಲಾಗಿದೆ.

ಕನ್ನಡ ನಾಡು-ನುಡಿ, ಸಾಹಿತ್ಯ, ಶಿಕ್ಷಣ ಹಾಗೂ ಸಾಂಸ್ಕೃತಿಕ ಚಟುವಟಿಕೆಗಳಲ್ಲಿ ಅವರು ಸಲ್ಲಿಸಿರುವ ಸೇವೆಯನ್ನು ಪರಿಗಣಿಸಿ ಈ ನೇಮಕ ಮಾಡಲಾಗಿದೆ ಎಂದು ಕಪ್ಪತ್ತಗಿರಿ ಫೌಂಡೇಶನ್ ಸಂಸ್ಥಾಪಕ ಅಧ್ಯಕ್ಷೆ ಶ್ರೀಮತಿ ಚಂದ್ರಕಲಾ ಎಂ. ಇಟಗಿಮಠ ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ನೇಮಕಗೊಂಡಿರುವ ಜುಬೇದ ನಾಯಕ ಅವರು ಕನ್ನಡ ನಾಡು-ನುಡಿಯ ಸೇವೆಗೆ ತನು, ಮನ ಮತ್ತು ಧನದಿಂದ ಶ್ರದ್ಧೆಯಿಂದ ಕಾರ್ಯನಿರ್ವಹಿಸುವುದಾಗಿ ತಿಳಿಸಿರುವುದಾಗಿ ಪ್ರಕಟಣೆಯಲ್ಲಿ ಹೇಳಲಾಗಿದೆ.

# ವೀರಶೈವ ಲಿಂಗಾಯತ ಸಮುದಾಯಕ್ಕೆ ಐದು ಸಚಿವ ಸ್ಥಾನ ನೀಡಿ: ರಂಭಾಪುರಿ ಶ್ರೀ

**ವಿಜಯಸಾಕ್ಷಿ ಸುದ್ದಿ, ಗದಗ**

ವೀರಶೈವ ಲಿಂಗಾಯತ ಸಮುದಾಯಕ್ಕೆ ರಾಜ್ಯ ಸಚಿವ ಸಂಪುಟದಲ್ಲಿ ಐದು ಸಚಿವ ಸ್ಥಾನಗಳನ್ನು ನೀಡಿದರೆ ಉತ್ತಮ ಆಡಳಿತ ನೀಡಬಲ್ಲ ಸಮರ್ಥ ನಾಯಕರು ಇದ್ದಾರೆ ಎಂದು ರಂಭಾಪುರಿ ಪೀಠದ ಜಗದ್ಗುರು ಪ್ರಸನ್ನ ರೇಣುಕ ಡಾ. ವೀರಸೋಮೇಶ್ವರ ಶಿವಾಚಾರ್ಯ ಸ್ವಾಮೀಜಿ ಹೇಳಿದರು.

ಗದಗದಲ್ಲಿ ಗುರುವಾರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ವೀರಶೈವ ಲಿಂಗಾಯತ ಸಮುದಾಯವು ರಾಜ್ಯದ ದೊಡ್ಡ ಸಮುದಾಯವಾಗಿದ್ದು, ರಾಜಕೀಯ ಅನುಭವ ಹೊಂದಿರುವ ಹಿರಿಯ ಶಾಸಕರು ಹಾಗೂ ವಿವಿಧ ಒಳಪಂಗಡಗಳಿಗೆ ಸೇರಿದ ಸಮರ್ಥ ನಾಯಕರಿಗೆ ಸೂಕ್ತ ಪ್ರಾತಿನಿಧ್ಯ ನೀಡಬೇಕು ಎಂದು ಹೇಳಿದರು.

ಯಾರಿಗೆ ಇದುವರೆಗೆ ಅವಕಾಶ ಸಿಕ್ಕಿಲ್ಲ, ಅಂತಹವರಿಗೆ ಸಚಿವ ಸ್ಥಾನ ನೀಡಲಾಗುವುದು ಎಂಬ ವಿಶ್ವಾಸವಿದೆ. ರಾಷ್ಟ್ರೀಯ ನಾಯಕರು ಪದೇಪದೇ ರಾಜ್ಯ ನಾಯಕರನ್ನು ದೆಹಲಿಗೆ ಕರೆಯುವ ಬದಲು, ಮುಖ್ಯಮಂತ್ರಿ ಅವರಿಗೆ ಸ್ವತಂತ್ರವಾಗಿ ಸಚಿವ ಸಂಪುಟ ರಚಿಸಲು ಅವಕಾಶ ನೀಡಬೇಕು. ಇದರಿಂದ ಉತ್ತಮ ಆಡಳಿತ ಸಾಧ್ಯವಾಗುತ್ತದೆ ಎಂದು ಅಭಿಪ್ರಾಯಪಟ್ಟರು.

ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಪ್ರಮಾಣವಚನ ಸ್ವೀಕಾರದ ವೇಳೆ ವೀರಗಂಗಾಧರ ಶಿವಾಚಾರ್ಯರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿರುವುದನ್ನು ಉಲ್ಲೇಖಿಸಿದ ಸ್ವಾಮೀಜಿ, ಅವರಿಗೆ ರಂಭಾಪುರಿ ಪೀಠದ ಬಗ್ಗೆ ವಿಶೇಷ ಗೌರವವಿದೆ ಎಂದು ಹೇಳಿದರು.

ರಾಜ್ಯ ಸರ್ಕಾರ ಗ್ಯಾರಂಟಿ ಯೋಜನೆಗಳನ್ನು ಪರಿಷ್ಕರಿಸುತ್ತಿರುವುದು ಸ್ವಾಗತಾರ್ಹ. ಯೋಜನೆಗಳ ಲಾಭ ನಿಜವಾದ ಅರ್ಹ ಫಲಾನುಭವಿಗಳಿಗೆ ತಲುಪಬೇಕು. ಜೊತೆಗೆ ರಸ್ತೆ, ಕುಡಿಯುವ ನೀರು, ಶಾಲೆಗಳು ಸೇರಿದಂತೆ ಮೂಲಸೌಕರ್ಯಗಳ ಅಭಿವೃದ್ಧಿಗೆ ಸರ್ಕಾರ ಹೆಚ್ಚಿನ ಆದ್ಯತೆ ನೀಡಬೇಕು ಎಂದು ಸಲಹೆ ನೀಡಿದರು.

### ಮೈದಾನದ ಗಡಿ ಗುರುತಿಸುವವರೆಗೆ ಕಾಮಗಾರಿ ಸ್ಥಗಿತಕ್ಕೆ ಒತ್ತಾಯ | ಜಾಗ ಒತ್ತುವರಿಯಾಗುವುದಿಲ್ಲ ಎಂದ ತಹಸೀಲ್ದಾರ್

# ಪ್ರಜಾಸೌಧ ಬೇಕು... ಕ್ರೀಡಾಂಗಣವೂ ಉಳಿಯಬೇಕು!



**ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಪಟ್ಟಣದ ಉಮಾ ವಿದ್ಯಾಲಯದ ಹಿಂಭಾಗದಲ್ಲಿರುವ ಕ್ರೀಡಾಂಗಣದ ಪಕ್ಕದಲ್ಲಿ ಪ್ರಜಾಸೌಧ ನಿರ್ಮಾಣ ಕಾಮಗಾರಿ ಆರಂಭವಾಗುತ್ತಿದ್ದಂತೆ ಕ್ರೀಡಾಪಟುಗಳು, ಕ್ರೀಡಾಭಿಮಾನಿಗಳು ಹಾಗೂ ಸಾರ್ವಜನಿಕರು ಮಂಗಳವಾರ ಸ್ಥಳದಲ್ಲೇ ಪ್ರತಿಭಟನೆ ನಡೆಸಿ, ಕ್ರೀಡಾಂಗಣಕ್ಕೆ ಮೀಸಲಾದ ಭೂಮಿಯ ಗಡಿ ಗುರುತಿಸುವವರೆಗೆ ಕಾಮಗಾರಿ ತಾತ್ಕಾಲಿಕವಾಗಿ ಸ್ಥಗಿತಗೊಳಿಸಬೇಕು ಎಂದು ಒತ್ತಾಯಿಸಿದರು.

ದೊಡ್ಡೂರ ರಸ್ತೆಗೆ ಹೊಂದಿಕೊಂಡಿರುವ ಕಂದಾಯ ಇಲಾಖೆಯ ಭೂಮಿಯಲ್ಲಿ ಪ್ರಜಾಸೌಧ ನಿರ್ಮಾಣ ಕಾಮಗಾರಿಗೆ ಗುತ್ತಿಗೆದಾರರು ಸಿದ್ಧತೆ ನಡೆಸುತ್ತಿದ್ದ ಮಾಹಿತಿ ತಿಳಿಯುತ್ತಿದ್ದಂತೆ ಪ್ರತಿಭಟನಾಕಾರರು ಸ್ಥಳಕ್ಕೆ ಆಗಮಿಸಿ, ಆಟದ ಮೈದಾನ ನಮ್ಮ ಹಕ್ಕು, ಕ್ರೀಡಾಂಗಣ ಉಳಿಸಿ ಎಂಬ ಘೋಷಣೆಗಳೊಂದಿಗೆ ಆಕ್ರೋಶ ವ್ಯಕ್ತಪಡಿಸಿದರು.

ಪ್ರತಿಭಟನೆಯ ವೇಳೆ ಮಾತನಾಡಿದ ಶರಣು ಗೋಡಿ, ಸೋಮಣ್ಣ ಉಪನಾಳ ಹಾಗೂ ಬಸಣ್ಣ ಬೆಂಡಿಗೇರಿ, ಪ್ರಜಾಸೌಧ ನಿರ್ಮಾಣಕ್ಕೆ ತಮ್ಮ ವಿರೋಧವಿಲ್ಲ.

ಆದರೆ ಯುವಜನ ಸೇವೆ ಮತ್ತು ಕ್ರೀಡಾ ಇಲಾಖೆಗೆ ಮೀಸಲಾದ 3.24 ಎಕರೆ ಕ್ರೀಡಾಂಗಣದ ಜಾಗ ಯಾವುದೇ ಕಾರಣಕ್ಕೂ ಕಡಿಮೆಯಾಗಬಾರದು ಅಥವಾ ಒತ್ತುವರಿಯಾಗಬಾರದು.

ಮೊದಲು ಭೂಮಿಯ ಸರ್ವೆ ನಡೆಸಿ ಗಡಿ ಗುರುತಿಸಬೇಕು. ಈ ಮೈದಾನದಿಂದ ಅನೇಕ ಕ್ರೀಡಾಪಟುಗಳು ತಾಲೂಕು, ಜಿಲ್ಲೆ, ರಾಜ್ಯ ಹಾಗೂ ರಾಷ್ಟ್ರಮಟ್ಟದಲ್ಲಿ ಸಾಧನೆ ಮಾಡಿದ್ದಾರೆ. ಮುಂದಿನ ಪೀಳಿಗೆಯ ಹಿತದೃಷ್ಟಿಯಿಂದ ಕ್ರೀಡಾಂಗಣ ಉಳಿಸಬೇಕು ಎಂದು ಒತ್ತಾಯಿಸಿದರು.

> **ಪ್ರಜಾಸೌಧ ನಿರ್ಮಾಣಕ್ಕೆ ನಮ್ಮ ವಿರೋಧವಿಲ್ಲ. ಆದರೆ ಕ್ರೀಡಾಂಗಣಕ್ಕೆ ಮೀಸಲಾದ ಒಂದಿಂಚು ಜಾಗವೂ ಕಡಿಮೆಯಾಗಬಾರದು. ಮೊದಲು ಸರ್ವೆ ಮಾಡಿ ಗಡಿ ಗುರುತಿಸಿ, ನಂತರ ಕಾಮಗಾರಿ ಆರಂಭಿಸಲಿ.**
> **– ಶರಣು ಗೋಡಿ, ಸೋಮಣ್ಣ ಉಪನಾಳ ಹಾಗೂ ಬಸಣ್ಣ ಬೆಂಡಿಗೇರಿ**

ಪ್ರತಿಭಟನೆಯ ಮಾಹಿತಿ ತಿಳಿದು ಸ್ಥಳಕ್ಕೆ ಆಗಮಿಸಿದ ತಹಶೀಲ್ದಾರ ಧನಂಜಯ ಎಂ. ಪ್ರತಿಭಟನಾಕಾರರೊಂದಿಗೆ ಸಮಾಲೋಚನೆ ನಡೆಸಿದರು. ಬಳಿಕ ಮಾತನಾಡಿದ ಅವರು, ಕ್ರೀಡಾಂಗಣಕ್ಕೆ ಮೀಸಲಾದ ಜಾಗೆಯಲ್ಲಿ ಯಾವುದೇ ಕಟ್ಟಡ ನಿರ್ಮಾಣ ನಡೆಯುತ್ತಿಲ್ಲ ಎಂದು ಸ್ಪಷ್ಟಪಡಿಸಿದರು.

2025ರಲ್ಲಿ ಪುರಸಭೆಗೆ ಸೇರಿದ 2.34 ಎಕರೆ ಭೂಮಿಯನ್ನು ಪ್ರಜಾಸೌಧ ನಿರ್ಮಾಣಕ್ಕಾಗಿ ಮಂಜೂರು ಮಾಡಲಾಗಿದೆ. ಸರ್ಕಾರ ₹8.60 ಕೋಟಿ ಅನುದಾನ ಬಿಡುಗಡೆ ಮಾಡಿದ್ದು, ಕರ್ನಾಟಕ ಹೌಸಿಂಗ್ ಬೋರ್ಡ್‌ಗೆ ಕಾಮಗಾರಿ ವಹಿಸಲಾಗಿದೆ. ಪ್ರಸ್ತುತ ನೀಲನಕ್ಷೆ ಪ್ರಕಾರ ಲೈನ್ ಔಟ್ ಹಾಕುವುದು ಹಾಗೂ ತಾತ್ಕಾಲಿಕ ಶೆಡ್ ನಿರ್ಮಿಸುವ ಕೆಲಸ ಮಾತ್ರ ನಡೆಯುತ್ತಿದೆ. ಕ್ರೀಡಾ ಇಲಾಖೆಯಿಂದ ಮನವಿ ಬಂದರೆ ಕ್ರೀಡಾಂಗಣದ ಗಡಿ ಸರ್ವೆ ಮಾಡಿ ಗುರುತಿಸಲು ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದರು.

> **ಕ್ರೀಡಾಂಗಣಕ್ಕೆ ಮೀಸಲಾದ ಜಾಗೆಯಲ್ಲಿ ಯಾವುದೇ ಕಟ್ಟಡ ನಿರ್ಮಾಣವಾಗುತ್ತಿಲ್ಲ. ಕ್ರೀಡಾ ಇಲಾಖೆಯಿಂದ ಮನವಿ ಬಂದರೆ ಗಡಿ ಸರ್ವೆ ಮಾಡಿ ಗುರುತಿಸಲು ಕ್ರಮ ಕೈಗೊಳ್ಳಲಾಗುವುದು.**
> **– ಧನಂಜಯ ಎಂ., ತಹಸೀಲ್ದಾರ್**

ಪ್ರತಿಭಟನೆಯಲ್ಲಿ ಇಸ್ಮಾಯಿಲ್ ಆಡೂರ, ಬಿ.ಬಿ. ಫಕ್ಕೀರಪ್ಪ, ಮೋಹನ ನಂದೆಣ್ಣವರ, ಚಂದ್ರು ಹಂಪಣ್ಣವರ ಸೇರಿದಂತೆ ಅನೇಕ ಕ್ರೀಡಾಪಟುಗಳು, ಕ್ರೀಡಾಭಿಮಾನಿಗಳು ಹಾಗೂ ಸಾರ್ವಜನಿಕರು ಭಾಗವಹಿಸಿದ್ದರು.

## ಕಾಮಗಾರಿ ಆರಂಭದ ಕ್ರಮ ಪ್ರಶ್ನಿಸಿದ ಕಾಂಗ್ರೆಸ್

ಈ ನಡುವೆ, ಲಕ್ಷ್ಮೇಶ್ವರ ತಾಲೂಕು ಕಾಂಗ್ರೆಸ್ ಬ್ಲಾಕ್ ಸಮಿತಿ ಅಧ್ಯಕ್ಷ ಜೆ.ಆರ್. ಕೊಪ್ಪದ ಪ್ರತ್ಯೇಕ ಹೇಳಿಕೆ ನೀಡಿ, ಪ್ರಜಾಸೌಧ ನಿರ್ಮಾಣಕ್ಕೆ ಕಾಂಗ್ರೆಸ್ ಸರ್ಕಾರವೇ ಭೂಮಿ ಹಾಗೂ ಕೋಟ್ಯಂತರ ರೂಪಾಯಿ ಅನುದಾನ ಒದಗಿಸಿದೆ. ಆದರೆ ಇಂತಹ ಮಹತ್ವದ ಯೋಜನೆಯನ್ನು ಸಚಿವರು, ಜನಪ್ರತಿನಿಧಿಗಳು ಹಾಗೂ ಸಾರ್ವಜನಿಕರ ಸಮ್ಮುಖದಲ್ಲಿ ಭೂಮಿಪೂಜೆ ನಡೆಸದೆ ಆರಂಭಿಸಿರುವುದು ಹಲವು ಅನುಮಾನಗಳಿಗೆ ಕಾರಣವಾಗಿದೆ ಎಂದು ಆರೋಪಿಸಿದರು. ಪ್ರಜಾಸೌಧ ನಿರ್ಮಾಣಕ್ಕೆ ವಿರೋಧವಿಲ್ಲ. ಆದರೆ ಕ್ರೀಡಾಂಗಣದ ಭೂಮಿ ಹಾಗೂ ಸಮೀಪದ ಗುಡಿಸಲು ನಿವಾಸಿಗಳ ಸಮಸ್ಯೆ ಇತ್ಯರ್ಥಪಡಿಸಿದ ಬಳಿಕವೇ ಭೂಮಿಪೂಜೆ ನೆರವೇರಿಸಿ ಕಾಮಗಾರಿ ಆರಂಭಿಸಬೇಕು. ಅಲ್ಲಿಯವರೆಗೆ ಕಾಮಗಾರಿ ತಾತ್ಕಾಲಿಕವಾಗಿ ಸ್ಥಗಿತಗೊಳಿಸುವಂತೆ ಜಿಲ್ಲಾಧಿಕಾರಿಗಳು ನಿರ್ದೇಶನ ನೀಡಬೇಕು ಎಂದು ಅವರು ಆಗ್ರಹಿಸಿದರು.

### ರೂರಲ್ ಕಿಂಗ್ಸ್, ನೈಟ್ ರೈಡರ್ಸ್, ಆರ್‌ಸಿಬಿ, ವಿನ್ನರ್ಸ್ ತಂಡಗಳ ನಡುವೆ ಸೆಣಸಾಟ; ಪತ್ರಕರ್ತರಲ್ಲಿ ಕ್ರೀಡಾ ಸಂಭ್ರಮ

# ಮಾಧ್ಯಮ ಕ್ರಿಕೆಟ್ ಲೀಗ್‌ಗೆ ಆಟಗಾರರ ಆಯ್ಕೆ ಪೂರ್ಣ



**ವಿಜಯಸಾಕ್ಷಿ ಸುದ್ದಿ, ಗದಗ**

ಪತ್ರಿಕಾ ದಿನಾಚರಣೆ2026ರ ಅಂಗವಾಗಿ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ (ಕಾನಿಪ) ಗದಗ ಜಿಲ್ಲಾ ಘಟಕ ಆಯೋಜಿಸಿರುವ ಜಿಲ್ಲಾ ಮಟ್ಟದ ಮಾಧ್ಯಮ ಕ್ರಿಕೆಟ್ ಲೀಗ್‌ಗೆ ಬುಧವಾರ ನಗರದ ಪತ್ರಿಕಾ ಭವನದಲ್ಲಿ ಆಟಗಾರರ ಆಯ್ಕೆ ಪ್ರಕ್ರಿಯೆ ನಡೆಯಿತು.

ಕಾನಿಪ ಜಿಲ್ಲಾ ಅಧ್ಯಕ್ಷ ರಾಜು ಹೆಬ್ಬಳ್ಳಿ ನೇತೃತ್ವದಲ್ಲಿ ನಡೆದ ಆಯ್ಕೆ ಪ್ರಕ್ರಿಯೆಯಲ್ಲಿ ಜಿಲ್ಲೆಯ ನಾಲ್ಕು ಮಾಧ್ಯಮ ತಂಡಗಳಿಗೆ ಆಟಗಾರರನ್ನು ಆಯ್ಕೆ ಮಾಡಲಾಯಿತು.

ಲೀಗ್‌ನಲ್ಲಿ ಜಗದೀಶ ಎಸ್.ಪಿ. ಮಾಲಿಕತ್ವದ ರೂರಲ್ ಕಿಂಗ್ಸ್, ಅಜಿತ್ ಹೊಂಬಾಳೆ ಮಾಲಿಕತ್ವದ ಆರ್‌ಸಿಬಿ, ಅನಂತ ಕಾರ್ಕಳ ಮಾಲಿಕತ್ವದ ವಿನ್ನರ್ಸ್ ಹಾಗೂ ಎಚ್.ಎಂ. ಶರೀಫನವರ ಮತ್ತು ಆನಂದಯ್ಯ ವೀರಕ್ತಮಠ ಮಾಲಿಕತ್ವದ ನೈಟ್ ರೈಡರ್ಸ್ ತಂಡಗಳು ಪ್ರಶಸ್ತಿಗಾಗಿ ಸೆಣಸಲಿವೆ.

ಈ ಸಂದರ್ಭದಲ್ಲಿ ಮಾತನಾಡಿದ ರಾಜು ಹೆಬ್ಬಳ್ಳಿ, ಪತ್ರಕರ್ತರು ದಿನನಿತ್ಯ ಒತ್ತಡದ ನಡುವೆ ಕಾರ್ಯನಿರ್ವಹಿಸುತ್ತಾರೆ. ಅವರಲ್ಲಿ ಕ್ರೀಡಾ ಮನೋಭಾವ ಬೆಳೆಸಲು ಹಾಗೂ ಮಾನಸಿಕ ನೆಮ್ಮದಿ ನೀಡುವ ಉದ್ದೇಶದಿಂದ ಮೊದಲ ಬಾರಿಗೆ ಮಾಧ್ಯಮ ಕ್ರಿಕೆಟ್ ಲೀಗ್ ಆಯೋಜಿಸಲಾಗಿದೆ ಎಂದರು.

ನೈಟ್ ರೈಡರ್ಸ್ ತಂಡದ ಮಾಲಿಕ ಆನಂದಯ್ಯ ವಿರಕ್ತಮಠ ಮಾತನಾಡಿ, ಕಾನಿಪ ಜಿಲ್ಲಾ ಘಟಕ ಪ್ರಸಕ್ತ ವರ್ಷ ಚೆಸ್, ಕೇರಂ ಸೇರಿದಂತೆ ಹಲವು ರಚನಾತ್ಮಕ ಕಾರ್ಯಕ್ರಮಗಳನ್ನು ಯಶಸ್ವಿಯಾಗಿ ನಡೆಸಿದೆ. ಇದೀಗ ಕ್ರಿಕೆಟ್ ಲೀಗ್ ಆಯೋಜಿಸಿರುವುದು ಉತ್ತಮ ಬೆಳವಣಿಗೆಯಾಗಿದ್ದು, ಜಿಲ್ಲೆಯ ಮಾಧ್ಯಮ ಬಂಧುಗಳೆಲ್ಲ ಒಂದೇ ವೇದಿಕೆಯಲ್ಲಿ ಸೇರುವ ಅವಕಾಶವಾಗಿದೆ. ಆಯ್ಕೆಯಾದ ಆಟಗಾರರು ಅತ್ಯುತ್ತಮ ಪ್ರದರ್ಶನ ನೀಡಿ ತಮ್ಮ ತಂಡಕ್ಕೆ ಗೆಲುವು ತಂದುಕೊಡಲಿ ಎಂದು ಹಾರೈಸಿದರು.

> **ಪತ್ರಕರ್ತರು ನಿರಂತರ ಒತ್ತಡದ ನಡುವೆ ಕೆಲಸ ಮಾಡುತ್ತಾರೆ. ಅವರಿಗೆ ನೆಮ್ಮದಿ, ಸ್ನೇಹ ಮತ್ತು ಕ್ರೀಡಾಸ್ಫೂರ್ತಿ ಬೆಳೆಸುವ ಉದ್ದೇಶದಿಂದ ಮೊದಲ ಬಾರಿಗೆ ಜಿಲ್ಲಾ ಮಾಧ್ಯಮ ಕ್ರಿಕೆಟ್ ಲೀಗ್ ಆಯೋಜಿಸಿದ್ದೇವೆ. ಎಲ್ಲರೂ ಕ್ರೀಡಾ ಮನೋಭಾವದಿಂದ ಭಾಗವಹಿಸಬೇಕು.**
> – **ರಾಜು ಹೆಬ್ಬಳ್ಳಿ,** ಜಿಲ್ಲಾಧ್ಯಕ್ಷ, ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ

## ಬಹುಮಾನಗಳು

1. ಪ್ರಥಮ ಬಹುಮಾನ: ₹5,501 ನಗದು ಹಾಗೂ ಟ್ರೋಫಿ
2. ದ್ವಿತೀಯ ಬಹುಮಾನ: ₹3,301 ನಗದು ಹಾಗೂ ಟ್ರೋಫಿ
3. ತೃತೀಯ ಬಹುಮಾನ: ₹2,201 ನಗದು ಹಾಗೂ ಟ್ರೋಫಿ

ಈ ಸಂದರ್ಭದಲ್ಲಿ ಎಚ್.ಎಂ. ಶರೀಫನವರ, ಜಗದೀಶ ಎಸ್.ಪಿ., ಅನಂತ ಕಾರ್ಕಳ, ಶರಣು ದೊಡ್ಡೂರ, ಅಜೀತ್ ಹೊಂಬಾಳೆ, ಅರುಣಕುಮಾರ ಹಿರೇಮಠ, ವೆಂಕಟೇಶ ಇಮರಾಪೂರ, ಸಂಜೀವಕುಮಾರ ಪಾಂಡ್ರೆ, ಗಿರೀಶ್ ಕಮ್ಮಾರ, ಸಂತೋಷ ಕೊಣ್ಣೂರ, ಅನಿಲ ತೆಂಬದಮನಿ, ಬನೇಶ ಕುಲಕರ್ಣಿ, ಸುರೇಶ ಕಡ್ಲಿಮಟ್ಟಿ, ಶಿವಕುಮಾರ ಕುಷ್ಟಗಿ, ಶಿವಾನಂದ ಹಿರೇಮಠ, ಮಂಜುನಾಥ ಶಿರಸಂಗಿ, ಮಂಜು ಪತ್ತಾರ, ಪ್ರಕಾಶ ಗುದ್ದಿನ ಸೇರಿದಂತೆ ಹಲವರು ಉಪಸ್ಥಿತರಿದ್ದರು.

### ಗೋವನಾಳದಲ್ಲಿ ವೀರಗಲ್ಲುಗಳಿಗೆ ಪೂಜೆ, ಶ್ರದ್ಧಾಂಜಲಿ | ರೈತರಿಗೆ ಅಗತ್ಯ ಸೌಲಭ್ಯ ಕಲ್ಪಿಸಲು ಒತ್ತಾಯ

# ರೈತ ಹುತಾತ್ಮರ ತ್ಯಾಗ ಸದಾ ಸ್ಮರಣೀಯ

**ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**



ರೈತ ಹುತಾತ್ಮ ದಿನಾಚರಣೆ ಅಂಗವಾಗಿ ಸಮೀಪದ ಗೋವನಾಳ ಗ್ರಾಮದಲ್ಲಿ ಮಂಗಳವಾರ ರೈತಪರ ಹೋರಾಟಗಾರರು ಹಾಗೂ ರಸ್ತೆ ಅಪಘಾತದಲ್ಲಿ ಮೃತಪಟ್ಟ ರೈತರ ವೀರಗಲ್ಲುಗಳಿಗೆ ಪೂಜೆ ಸಲ್ಲಿಸಿ ಶ್ರದ್ಧಾಂಜಲಿ ಅರ್ಪಿಸಲಾಯಿತು.

ಸುಮಾರು 33 ವರ್ಷಗಳ ಹಿಂದೆ (1993) ಬೆಂಗಳೂರಿನಲ್ಲಿ ನಡೆದ ಅಂತರರಾಷ್ಟ್ರೀಯ ರೈತ ಸಮಾವೇಶಕ್ಕೆ ತೆರಳಿದ್ದ ವೇಳೆ ರಸ್ತೆ ಅಪಘಾತದಲ್ಲಿ ಮೃತಪಟ್ಟ ಫಕ್ಕೀರಗೌಡ ಮಣಕಟ್ಟಿ, ರಾಮಣ್ಣ ಹುಬ್ಬಳ್ಳಿ ಹಾಗೂ ಉಡಚಪ್ಪ ವಾಲಿಕಾರ ಅವರ ಸ್ಮರಣಾರ್ಥ ಗ್ರಾಮದ ಅಗಸಿಯಲ್ಲಿ ಸ್ಥಾಪಿಸಿರುವ ವೀರಗಲ್ಲುಗಳಿಗೆ ಗ್ರಾಮಸ್ಥರು ಪುಷ್ಪನಮನ ಸಲ್ಲಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಜಿಲ್ಲಾ ಪಂಚಾಯಿತಿ ಮಾಜಿ ಅಧ್ಯಕ್ಷ ಎಸ್.ಪಿ. ಬಳಿಗಾರ, ರೈತರು, ಶಿಕ್ಷಕರು ಹಾಗೂ ಸೈನಿಕರು ದೇಶದ ಬೆನ್ನೆಲುಬಾಗಿದ್ದು, ಅವರ ಸೇವೆಯನ್ನು ಸಮಾಜ ಸದಾ ಗೌರವಿಸಬೇಕು ಎಂದರು.

ರೈತರಿಗೆ ಸಿಗಬೇಕಾದ ಸೌಲಭ್ಯಗಳು ಇನ್ನೂ ಸಮರ್ಪಕವಾಗಿ ದೊರೆಯುತ್ತಿಲ್ಲ ಎಂಬುದು ವಿಷಾದದ ಸಂಗತಿ. ಈ ವರ್ಷ ಮಳೆಯ ಕೊರತೆಯಿಂದ ರೈತರು ತೀವ್ರ ಆರ್ಥಿಕ ಸಂಕಷ್ಟಕ್ಕೆ ಸಿಲುಕಿದ್ದು, ಸಾಲ ಮಾಡಿ ಬಿತ್ತನೆ ನಡೆಸಿರುವ ರೈತರಿಗೆ ಸರ್ಕಾರ ನೆರವಿನ ಹಸ್ತ ಚಾಚಬೇಕಿದೆ ಎಂದು ಅವರು ಒತ್ತಾಯಿಸಿದರು.

ಪಿಎಸ್‌ಐ ನಾಗರಾಜ ಗಡದ ಮಾತನಾಡಿ, ಕೃಷಿ ಅತ್ಯಂತ ಶ್ರೇಷ್ಠ ವೃತ್ತಿಯಾಗಿದ್ದು, ಬೆವರು ಸುರಿಸಿ ದುಡಿಯುವ ರೈತರು ಯುವಜನತೆಗೆ ಮಾದರಿಯಾಗಬೇಕು ಎಂದರು. ಕೊರೊನಾ ಅವಧಿಯಲ್ಲಿ ಅನೇಕ ವಿದ್ಯಾವಂತರು ಕೃಷಿಯತ್ತ ಮರಳಿರುವುದು ಉತ್ತಮ ಬೆಳವಣಿಗೆಯಾಗಿದ್ದು, ಕೃಷಿಯ ಜೊತೆಗೆ ಹೈನುಗಾರಿಕೆ, ಕುರಿ ಸಾಕಾಣಿಕೆ ಹಾಗೂ ಮೀನು ಸಾಕಾಣಿಕೆಯಂತಹ ಪೂರಕ ಕಸಬುಗಳತ್ತ ರೈತರು ಗಮನ ಹರಿಸಬೇಕು ಎಂದು ಸಲಹೆ ನೀಡಿದರು.

> **ರೈತರು, ಶಿಕ್ಷಕರು ಮತ್ತು ಸೈನಿಕರು ದೇಶದ ಬೆನ್ನೆಲುಬು. ರೈತರಿಗೆ ಸಿಗಬೇಕಾದ ಸೌಲಭ್ಯಗಳನ್ನು ಸರ್ಕಾರ ಸಮರ್ಪಕವಾಗಿ ಕಲ್ಪಿಸಿದಾಗಲೇ ರೈತ ಹುತಾತ್ಮ ದಿನಾಚರಣೆಗೆ ನಿಜವಾದ ಅರ್ಥ ಬರುತ್ತದೆ.**
> **– ಎಸ್.ಪಿ. ಬಳಿಗಾರ,** ಮಾಜಿ ಅಧ್ಯಕ್ಷ, ಜಿಲ್ಲಾ ಪಂಚಾಯಿತಿ

ಕಾರ್ಯಕ್ರಮದಲ್ಲಿ ಭರಮಣ್ಣ ರೊಟ್ಟಿಗವಾಡ, ಡಿ.ವೈ. ಹುನಗುಂದ, ಮಾಲತೇಶ ಪಾಟೀಲ, ಅಜಯ ಕರಿಗೌಡ್ರ, ಚಂದ್ರಗೌಡ ಕರಿಗೌಡ್ರ, ವಸಂತಗೌಡ ಕರಿಗೌಡ್ರ, ಚಂದ್ರು ತಳವಾರ, ಮಂಜುನಾಥ ಕೆಂಚನಗೌಡರ, ನಿಂಗನಗೌಡ ಮಣಕಟ್ಟಿ, ಪಿಡಿಒ ಜಗದೀಶ ಕುರುಬರ, ಗಡ್ಡದೇವರಮಠ ಸೇರಿದಂತೆ ಹಲವರು ಉಪಸ್ಥಿತರಿದ್ದರು.

### ಹಗರಿಬೊಮ್ಮನಹಳ್ಳಿಯಲ್ಲಿ ಪತ್ರಿಕಾ ದಿನಾಚರಣೆ | ವಿವಿಧ ಕ್ಷೇತ್ರಗಳ ಸಾಧಕರಿಗೆ ಸನ್ಮಾನ

# ಪತ್ರಕರ್ತರ ಹಿತ ರಕ್ಷಣೆಗೆ ಹಗಲಿರುಳು ಶ್ರಮಿಸುವೆ



**ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ**

ರಾಜ್ಯಾದ್ಯಂತ ಹಗಲಿರುಳು ದುಡಿಯುವ ಪತ್ರಕರ್ತರ ಹಿತ ರಕ್ಷಣೆಗಾಗಿ ಸದಾ ಬದ್ಧನಾಗಿದ್ದು, ಅವರ ಮೂಲಭೂತ ಹಕ್ಕುಗಳು ಮತ್ತು ಸೌಲಭ್ಯಗಳಿಗಾಗಿ ನಿರಂತರವಾಗಿ ಹೋರಾಟ ನಡೆಸುತ್ತೇನೆ ಎಂದು ಕರ್ನಾಟಕ ರಾಜ್ಯ ಪತ್ರಕರ್ತರ ಧ್ವನಿ ಸಂಘಟನೆಯ ರಾಜ್ಯಾಧ್ಯಕ್ಷ ಬಂಗ್ಲೆ ಮಲ್ಲಿಕಾರ್ಜುನ ಹೇಳಿದರು.

ಪಟ್ಟಣದ ವಾಲ್ಮೀಕಿ ಭವನದಲ್ಲಿ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಧ್ವನಿ ಸಂಘಟನೆಯಿಂದ ಆಯೋಜಿಸಿದ್ದ ಪತ್ರಿಕಾ ದಿನಾಚರಣೆ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಪತ್ರಕರ್ತರಿಗೆ ಜೀವ ವಿಮೆ, ಸಾಮಾಜಿಕ ಭದ್ರತೆ ಸೇರಿದಂತೆ ಅಗತ್ಯ ಸೌಲಭ್ಯಗಳನ್ನು ಸರ್ಕಾರ ಕಲ್ಪಿಸಬೇಕು. ಪ್ರತಿಯೊಂದು ತಾಲೂಕಿನಲ್ಲಿ ಪತ್ರಿಕಾ ಭವನ ನಿರ್ಮಿಸಿ ಪತ್ರಕರ್ತರ ಹಿತಾಸಕ್ತಿಯನ್ನು ಕಾಪಾಡುವುದು ಸರ್ಕಾರದ ಜವಾಬ್ದಾರಿಯಾಗಿದೆ ಎಂದು ಒತ್ತಾಯಿಸಿದರು.

ದಿ ಹ್ಯಾಪಿ ವರ್ಲ್ಡ್ ಪತ್ರಿಕೆಯ ಸಂಪಾದಕ ಹಾಗೂ ಉಪನ್ಯಾಸಕ ಎಂ. ಶಿವಮೂರ್ತಿ ಮಾತನಾಡಿ, ರಾಜ್ಯದಲ್ಲಿ ಸಾವಿರಾರು ಪತ್ರಿಕೆಗಳು ಮತ್ತು ನೂರಾರು ಸುದ್ದಿ ವಾಹಿನಿಗಳಿದ್ದರೂ ಸಮಾಜದಲ್ಲಿ ಅಹಿತಕರ ಘಟನೆಗಳು ನಡೆಯುತ್ತಿವೆ. ಪತ್ರಕರ್ತರು ಸತ್ಯ, ನೈಜ ಹಾಗೂ ಜವಾಬ್ದಾರಿಯುತ ಸುದ್ದಿಗಳನ್ನು ಪ್ರಕಟಿಸುವ ಮೂಲಕ ಸಮಾಜದ ಅಭಿವೃದ್ಧಿಗೆ ಕೈಜೋಡಿಸಬೇಕು ಎಂದು ಹೇಳಿದರು.

> **ಪತ್ರಕರ್ತರು ಬಿಸಿಲು, ಮಳೆ, ಚಳಿ ಎನ್ನದೆ ಸಮಾಜಕ್ಕಾಗಿ ಹಗಲಿರುಳು ದುಡಿಯುತ್ತಾರೆ. ಅವರಿಗೆ ಜೀವ ವಿಮೆ, ಸಾಮಾಜಿಕ ಭದ್ರತೆ ಹಾಗೂ ತಾಲೂಕು ಮಟ್ಟದಲ್ಲಿ ಪತ್ರಿಕಾ ಭವನ ಕಲ್ಪಿಸುವುದು ಸರ್ಕಾರದ ಆದ್ಯ ಕರ್ತವ್ಯ.**
> **– ಬಂಗ್ಲೆ ಮಲ್ಲಿಕಾರ್ಜುನ,** ರಾಜ್ಯಾಧ್ಯಕ್ಷ, ಕರ್ನಾಟಕ ರಾಜ್ಯ ಪತ್ರಕರ್ತರ ಧ್ವನಿ ಸಂಘಟನೆ

ಪುರಸಭೆಯ ಮಾಜಿ ಅಧ್ಯಕ್ಷ ಮರಿರಾಮಪ್ಪ ಮಾತನಾಡಿ, ಪತ್ರಿಕಾ ದಿನಾಚರಣೆ ಅಂಗವಾಗಿ ವಿವಿಧ ಕ್ಷೇತ್ರಗಳ ಸಾಧಕರನ್ನು ಗುರುತಿಸಿ ಸನ್ಮಾನಿಸಿರುವುದು ಶ್ಲಾಘನೀಯ ಕಾರ್ಯ ಎಂದರು. ಸ್ಫೂರ್ತಿ ಚಾನೆಲ್ ಮುಖ್ಯಸ್ಥ ಡಿಷ್ ಮಂಜುನಾಥ ಮಾತನಾಡಿ, ಸಾಮಾಜಿಕ ಜಾಲತಾಣಗಳ ಪ್ರಭಾವದಿಂದ ಓದುಗರ ಸಂಖ್ಯೆ ಕಡಿಮೆಯಾಗಿದ್ದರೂ ಓದುವ ಸಂಸ್ಕೃತಿ ಉಳಿಯಬೇಕು. ಸಮಾಜಕ್ಕೆ ಸೇವೆ ಸಲ್ಲಿಸಿದವರನ್ನು ಗೌರವಿಸುವ ಇಂತಹ ಕಾರ್ಯಕ್ರಮಗಳು ಮಾದರಿಯಾಗಿವೆ ಎಂದರು. ನಂದಿಪುರ ಸುಕ್ಷೇತ್ರ ಮಠದ ಡಾ. ಮಹೇಶ್ವರ ಸ್ವಾಮೀಜಿ ಮಾತನಾಡಿ, ಪತ್ರಕರ್ತರು ವಿಶ್ವಾಸಾರ್ಹ ಸುದ್ದಿಗಳನ್ನು ಸಮಾಜಕ್ಕೆ ತಲ್ಪುಪಿಸಿದಾಗ ಮಾತ್ರ ಸಾರ್ವಜನಿಕರ ವಿಶ್ವಾಸ ಮತ್ತಷ್ಟು ಗಟ್ಟಿಯಾಗುತ್ತದೆ ಎಂದರು.

ಹಾಲಸ್ವಾಮಿ ಮಠದ ಹಾಲಶಂಕರ ಸ್ವಾಮೀಜಿ ಮಾತನಾಡಿ, ಪ್ರಜಾಪ್ರಭುತ್ವದ ನಾಲ್ಕನೇ ಅಂಗವಾದ ಪತ್ರಿಕಾರಂಗವು ನೈಜತೆ ಮತ್ತು ಧೈರ್ಯದಿಂದ ಕಾರ್ಯನಿರ್ವಹಿಸಬೇಕು. ಒಂದು ಹನಿ ಮಸಿ ಕೋಟಿ ಜನಕ್ಕೆ ಬಿಸಿ ಎಂಬ ಡಾ. ಬಿ.ಆರ್. ಅಂಬೇಡ್ಕರ್ ಅವರ ಮಾತನ್ನು ಪ್ರತಿಯೊಬ್ಬ ಪತ್ರಕರ್ತರೂ ನೆನಪಿನಲ್ಲಿಟ್ಟುಕೊಳ್ಳಬೇಕು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ 23 ಮಂದಿ ಸಾಧಕರನ್ನು ಸನ್ಮಾನಿಸಿ ಸ್ಮರಣ ಫಲಕ ನೀಡಿ ಗೌರವಿಸಲಾಯಿತು. ಪ್ರಶಸ್ತಿ ಪುರಸ್ಕೃತರ ಪರಿಚಯವನ್ನು ಡಿಜಿಟಲ್ ಮಾಧ್ಯಮದ ಮೂಲಕ ಪ್ರದರ್ಶಿಸಿದ್ದು ವಿಶೇಷ ಆಕರ್ಷಣೆಯಾಗಿತ್ತು.

ವೇದಿಕೆಯಲ್ಲಿ ತಾಲೂಕು ಅಧ್ಯಕ್ಷ ಜಿ. ಸೋಮನಾಥ, ಹಿರಿಯ ಕಾಂಗ್ರೆಸ್ ಮುಖಂಡ ಹೆಗ್ಡಾಳ್ ರಾಮಣ್ಣ, ತಾಲೂಕು ಗ್ಯಾರಂಟಿ ಸಮಿತಿ ಅಧ್ಯಕ್ಷ ಗುರುಬಸವರಾಜ ಸೊನ್ನದ, ಜಿಲ್ಲಾ ಗ್ಯಾರಂಟಿ ಸಮಿತಿ ಉಪಾಧ್ಯಕ್ಷ ಜಂದಿಸಾಬ್, ಹಿರಿಯ ಕಲಾವಿದ ಜೆ. ಯೋಗಾನಂದ, ಕ್ಷೇತ್ರ ಶಿಕ್ಷಣಾಧಿಕಾರಿ ಮೈಲೇಶ್ ಬೇವೂರ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ಕಾರ್ಯಕ್ರಮದಲ್ಲಿ 200ಕ್ಕೂ ಹೆಚ್ಚು ಜನರು ಭಾಗವಹಿಸಿದ್ದರು. ರೇಣುಕಾ ಕಾಲೇಜಿನ ವಿದ್ಯಾರ್ಥಿಗಳು ಮತ್ತು ಸಿಬ್ಬಂದಿಯೂ ಪಾಲ್ಗೊಂಡಿದ್ದರು. ಡೊಳ್ಳು ವಾದನ, ಹೋಳಿಗೆ ಊಟ ಹಾಗೂ ಕೊನೆಯಲ್ಲಿ ಸಂಘಟನೆಯ ಪದಾಧಿಕಾರಿಗಳಿಗೆ ಮಠಾಧೀಶರಿಂದ ಸನ್ಮಾನ ನೆರವೇರಿತು. ಅಡ್ವೋಕೇಟ್ ಹಣಮಂತು ಕಾರ್ಯಕ್ರಮ ನಿರೂಪಿಸಿದರು.

# ಮಣ್ಣಿನ ಕಲಾಕೃತಿ ಸ್ಪರ್ಧೆಯಲ್ಲಿ ವಿದ್ಯಾರ್ಥಿಗಳ ಸೃಜನಶೀಲತೆ ಅನಾವರಣ

**ವಿಜಯಸಾಕ್ಷಿ ಸುದ್ದಿ, ಗದಗ**


ವಿದ್ಯಾರ್ಥಿಗಳಲ್ಲಿ ಸೃಜನಶೀಲತೆ, ಕಲಾಸಕ್ತಿ ಹಾಗೂ ಏಕಾಗ್ರತೆಯನ್ನು ಬೆಳೆಸುವ ಉದ್ದೇಶದಿಂದ ನಗರದ ಪ್ರಕಲ್ಪ ಹಿರಿಯ ಪ್ರಾಥಮಿಕ ಆಂಗ್ಲ ಮಾಧ್ಯಮ ಶಾಲೆಯಲ್ಲಿ ಮಣ್ಣಿನ ಕಲಾಕೃತಿ ರಚನೆ ಸ್ಪರ್ಧೆಯನ್ನು ಆಯೋಜಿಸಲಾಯಿತು.

ಮೂರನೇ ತರಗತಿಯಿಂದ ಎಂಟನೇ ತರಗತಿವರೆಗಿನ ವಿದ್ಯಾರ್ಥಿಗಳಿಗಾಗಿ ಆಯೋಜಿಸಿದ್ದ ಸ್ಪರ್ಧೆಯಲ್ಲಿ 45 ವಿದ್ಯಾರ್ಥಿಗಳು ಉತ್ಸಾಹದಿಂದ ಭಾಗವಹಿಸಿ ತಮ್ಮ ಕಲಾ ಪ್ರತಿಭೆಯನ್ನು ಪ್ರದರ್ಶಿಸಿದರು. ಸ್ಪರ್ಧೆಯ ಮೂಲಕ ಮಕ್ಕಳಲ್ಲಿ ಸೃಜನಶೀಲತೆ, ಕೈ-ಕಣ್ಣಿನ ಸಮನ್ವಯ, ಸೂಕ್ಷ್ಮ ಚಲನ ಕೌಶಲ್ಯ ಹಾಗೂ ಅನುಭವದ ಮೂಲಕ ಕಲಿಕೆಯ ಮನೋಭಾವವನ್ನು ಬೆಳೆಸುವ ಪ್ರಯತ್ನ ಮಾಡಲಾಯಿತು. ವಿದ್ಯಾರ್ಥಿಗಳು ವಿವಿಧ ರೀತಿಯ ಮಣ್ಣಿನ ಕಲಾಕೃತಿಗಳನ್ನು ರಚಿಸಿ ಮೆಚ್ಚುಗೆಗೆ ಪಾತ್ರರಾದರು.

ಈ ಸಂದರ್ಭದಲ್ಲಿ ಶಾಲೆಯ ಸಂಸ್ಥಾಪಕ ಹಾಗೂ ಅಧ್ಯಕ್ಷ ಎಸ್.ವಿ. ಹುಬ್ಬಳ್ಳಿ ಮಾತನಾಡಿ, ಪ್ರತಿಯೊಬ್ಬ ವಿದ್ಯಾರ್ಥಿಯಲ್ಲೂ ವಿಶೇಷ ಪ್ರತಿಭೆ ಅಡಗಿದೆ. ಇಂತಹ ಸ್ಪರ್ಧೆಗಳು ಅವರ ಪ್ರತಿಭೆಯನ್ನು ಹೊರತರಲು ಉತ್ತಮ ವೇದಿಕೆಯಾಗುತ್ತವೆ ಎಂದು ಹೇಳಿದರು.

ಕಾರ್ಯಕ್ರಮವನ್ನು ಶಾಲೆಯ ಶಿಕ್ಷಕ ಹಾಗೂ ಸಿಬ್ಬಂದಿ ವರ್ಗದವರು ಅಚ್ಚುಕಟ್ಟಾಗಿ ಆಯೋಜಿಸಿದ್ದರು. ಸ್ಪರ್ಧೆಯಲ್ಲಿ ಭಾಗವಹಿಸಿದ ಎಲ್ಲಾ ವಿದ್ಯಾರ್ಥಿಗಳನ್ನು ಹಾಗೂ ಕಾರ್ಯಕ್ರಮ ಯಶಸ್ವಿಗೊಳಿಸಿದ ಶಿಕ್ಷಕರನ್ನು ಅಭಿನಂದಿಸಲಾಯಿತು.

> **ಪ್ರತಿಯೊಬ್ಬ ವಿದ್ಯಾರ್ಥಿಯಲ್ಲೂ ವಿಶೇಷ ಪ್ರತಿಭೆ ಅಡಗಿದೆ. ಅದನ್ನು ಗುರುತಿಸಿ ಬೆಳೆಸಲು ಇಂತಹ ಸೃಜನಾತ್ಮಕ ಚಟುವಟಿಕೆಗಳು ಅಗತ್ಯ.**
> **– ಎಸ್.ವಿ. ಹುಬ್ಬಳ್ಳಿ,** ಸಂಸ್ಥಾಪಕ-ಅಧ್ಯಕ್ಷರು, ಪ್ರಕಲ್ಪ ಹಿರಿಯ ಪ್ರಾಥಮಿಕ ಆಂಗ್ಲ ಮಾಧ್ಯಮ ಶಾಲೆ



# ಸಂಘಟನೆ, ಸೇವೆ, ಸರಳತೆಯ ಮೂಲಕ ಸಾವಿರಾರು ಸರ್ಕಾರಿ ನೌಕರರ ವಿಶ್ವಾಸ ಗಳಿಸಿದ ಡಾ. ಬಸವರಾಜ ಬಳ್ಳಾರಿ ಅವರ 49ನೇ ಜನ್ಮದಿನದ ವಿಶೇಷ



ಹುದ್ದೆಗಳು ಹಲವರನ್ನು ದೊಡ್ಡವರನ್ನಾಗಿಸುತ್ತವೆ. ಆದರೆ ಕೆಲವರು ತಮ್ಮ ವ್ಯಕ್ತಿತ್ವದಿಂದಲೇ ಹುದ್ದೆಗಳಿಗೆ ಗೌರವ ತಂದುಕೊಡುತ್ತಾರೆ. ಅಂತಹ ವಿರಳ ವ್ಯಕ್ತಿತ್ವಗಳಲ್ಲಿ ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ಗದಗ ಜಿಲ್ಲಾಧ್ಯಕ್ಷ ಡಾ. ಬಸವರಾಜ ವೆಂಕಪ್ಪ ಬಳ್ಳಾರಿ ಪ್ರಮುಖರು. ಸಂಘಟನಾ ಚತುರತೆ, ಸರಳತೆ, ಮಾನವೀಯತೆ ಮತ್ತು ಸೇವಾ ಮನೋಭಾವದಿಂದ ಸಾವಿರಾರು ಸರ್ಕಾರಿ ನೌಕರರ ಪ್ರೀತಿಗೆ ಪಾತ್ರರಾಗಿರುವ ಅವರು ಜುಲೈ 23ರಂದು 49ನೇ ವಸಂತಕ್ಕೆ ಕಾಲಿಡುತ್ತಿದ್ದಾರೆ.

ಅರ್ಧಶತಕದ ಜೀವನದ ಸಂಭ್ರಮಕ್ಕೆ ಇನ್ನೂ ಒಂದು ವರ್ಷ ಬಾಕಿ ಇದ್ದರೂ, ಸಮಾಜಮುಖಿ ಸೇವೆ, ನೌಕರರ ಹಿತಾಸಕ್ತಿ ಮತ್ತು ಶಿಕ್ಷಣ ಕ್ಷೇತ್ರದಲ್ಲಿ ಅವರು ಸಲ್ಲಿಸಿರುವ ಸೇವೆ ಈಗಾಗಲೇ ಶತಕದ ಸಾಧನೆಗೆ ಸಮನಾಗಿದೆ.





## ಪ್ರತಿಭಾವಂತರಿಗೆ ಆಸರೆಯಾದ ಗುರು

ಡಾ. ಬಸವರಾಜ ಬಳ್ಳಾರಿಯವರಿಗೆ ಬಡ ಹಾಗೂ ಪ್ರತಿಭಾವಂತ ವಿದ್ಯಾರ್ಥಿಗಳೆಂದರೆ ವಿಶೇಷ ಪ್ರೀತಿ. ಆರ್ಥಿಕವಾಗಿ ಹಿಂದುಳಿದ ಮಕ್ಕಳ ಶಿಕ್ಷಣಕ್ಕೆ ಸಹಾಯ ಮಾಡುವುದರ ಜೊತೆಗೆ, ಅವರ ಪ್ರತಿಭೆಯನ್ನು ಗುರುತಿಸಿ ಪ್ರೋತ್ಸಾಹಿಸುವ ಕಾರ್ಯವನ್ನು ನಿರಂತರವಾಗಿ ಮಾಡುತ್ತಿದ್ದಾರೆ. ಅವರ ಮಾರ್ಗದರ್ಶನದಲ್ಲಿ ಬೆಳೆದ ಅನೇಕ ವಿದ್ಯಾರ್ಥಿಗಳು ಇಂದು ಉನ್ನತ ಶಿಕ್ಷಣ ಪಡೆದು ದೇಶ-ವಿದೇಶಗಳಲ್ಲಿ ಉದ್ಯೋಗ ನಿರ್ವಹಿಸುತ್ತಿದ್ದಾರೆ.




## ನೌಕರರ ಧ್ವನಿಯಾಗಿ ಬೆಳೆದ ನಾಯಕ

### ವಿಶೇಷ ಸಾಧನೆಗಳು

1. ಪಿಎಚ್.ಡಿ. ಪದವೀಧರ ಅಧಿಕಾರಿ ಮತ್ತು ಸಂಘಟನಾ ನಾಯಕ
2. ಸಾವಿರಾರು ಸರ್ಕಾರಿ ನೌಕರರ ವಿಶ್ವಾಸ ಗಳಿಸಿದ ಜಿಲ್ಲಾಧ್ಯಕ್ಷ
3. ಪ್ರತಿಭಾವಂತ ವಿದ್ಯಾರ್ಥಿಗಳಿಗೆ ನಿರಂತರ ಪ್ರೋತ್ಸಾಹ
4. ಜಿಲ್ಲಾ ಮಟ್ಟದ ಐತಿಹಾಸಿಕ ಸರ್ಕಾರಿ ನೌಕರರ ಕ್ರೀಡಾಕೂಟದ ಯಶಸ್ವಿ ಆಯೋಜನೆ
5. 1,500ಕ್ಕೂ ಹೆಚ್ಚು ಕ್ರೀಡಾಪಟುಗಳಿಗೆ ಉಚಿತ ಟ್ರ್ಯಾಕ್‌ಸೂಟ್ ವಿತರಣೆ
6. 29 ವರ್ಷಗಳ ಬಳಿಕ ಗದಗ ಜಿಲ್ಲೆಗೆ ರಾಜ್ಯ ಕಾರ್ಯಕಾರಿ ಸಮಿತಿ ಸಭೆ ಆಯೋಜಿಸಿದ ಸಾಧನೆ


ಸಂಘಟನೆ ಬಲಿಷ್ಠವಾಗಿದ್ದರೆ ನೌಕರರ ಧ್ವನಿ ಇನ್ನಷ್ಟು ಗಟ್ಟಿಯಾಗುತ್ತದೆ. ಎಲ್ಲರನ್ನು ಸಮಾನವಾಗಿ ಕಂಡು ಅವರ ಸಮಸ್ಯೆಗಳಿಗೆ ಸ್ಪಂದಿಸುವುದೇ ನನ್ನ ಧ್ಯೇಯ.

**- ಡಾ. ಬಸವರಾಜ ವೆಂಕಪ್ಪ ಬಳ್ಳಾರಿ**

## ಹಿರೇವಡ್ಡಟ್ಟಿಯಿಂದ ರಾಜ್ಯ ಮಟ್ಟದ ನಾಯಕತ್ವದವರೆಗೆ

1977ರ ಜುಲೈ 23ರಂದು ಮುಂಡರಗಿ ತಾಲೂಕಿನ ಹಿರೇವಡ್ಡಟ್ಟಿ ಗ್ರಾಮದಲ್ಲಿ ವೆಂಕಪ್ಪ ಹಾಗೂ ನಾಗಮ್ಮ ದಂಪತಿಯ ಪುತ್ರರಾಗಿ ಜನಿಸಿದ ಬಸವರಾಜ ಬಳ್ಳಾರಿ, ಪ್ರಾಥಮಿಕ ಶಿಕ್ಷಣವನ್ನು ಸ್ವಗ್ರಾಮದಲ್ಲೇ ಪೂರ್ಣಗೊಳಿಸಿದರು. ಗದಗದ ಮಹಾರಾಣಾ ಪ್ರತಾಪ ಸಿಂಹ ಶಿಕ್ಷಣ ಸಂಸ್ಥೆಯಲ್ಲಿ ಪ್ರೌಢಶಿಕ್ಷಣ, ಕೆವಿಎಸ್‌ಆರ್ ಕಾಲೇಜಿನಲ್ಲಿ ಪದವಿಪೂರ್ವ ಹಾಗೂ ಕೆಎಸ್‌ಎಸ್ ಕಾಲೇಜಿನಲ್ಲಿ ಪದವಿ ಶಿಕ್ಷಣ ಪೂರ್ಣಗೊಳಿಸಿದರು.

ಪದವಿಯಲ್ಲಿ ಡಿಸ್ಟಿಂಕ್ಷನ್ ಪಡೆದ ಏಕೈಕ ವಿದ್ಯಾರ್ಥಿಯಾಗಿ ಹೊರಹೊಮ್ಮಿದ ಅವರು ನಂತರ ಬಿ.ಎಡ್., ಎಂ.ಎ. (ಇತಿಹಾಸ), ಎಂ.ಎ. (ಪ್ರಾಚ್ಯಶಾಸ್ತ್ರ), ಎಂ.ಎಡ್., ಎಂ.ಎಸ್‌ಸಿ. (ಭೂಗೋಳಶಾಸ್ತ್ರ) ಹಾಗೂ ಪಿಎಚ್.ಡಿ. ಪದವಿಗಳನ್ನು ಪಡೆದು ಉನ್ನತ ವಿದ್ಯಾಭ್ಯಾಸದ ಮೂಲಕ ಮಾದರಿಯಾದರು.







## ಶಿಕ್ಷಕರಿಂದ ಇಲಾಖೆಯ ಅಧಿಕಾರಿವರೆಗೆ

ಮೊರಾರ್ಜಿ ದೇಸಾಯಿ ವಸತಿ ಶಾಲೆಯಲ್ಲಿ ಶಿಕ್ಷಕರಾಗಿ ವೃತ್ತಿಜೀವನ ಆರಂಭಿಸಿದ ಅವರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಲ್ಲಿ ವಿವಿಧ ಹುದ್ದೆಗಳಲ್ಲಿ ಸೇವೆ ಸಲ್ಲಿಸಿದರು. ನಂತರ ಜಿಲ್ಲಾ ಪ್ರವಾಸೋದ್ಯಮ ಇಲಾಖೆಯ ಸಹಾಯಕ ನಿರ್ದೇಶಕರಾಗಿ ಹಾಗೂ ಪ್ರಸ್ತುತ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರಾಗಿ ಕಾರ್ಯನಿರ್ವಹಿಸುತ್ತಿದ್ದಾರೆ.



ಸರಳತೆ, ಸೇವಾ ಮನೋಭಾವ, ಸಂಘಟನಾ ಸಾಮರ್ಥ್ಯ ಹಾಗೂ ಮಾನವೀಯ ಮೌಲ್ಯಗಳ ಸಂಗಮವಾಗಿರುವ ಡಾ. ಬಸವರಾಜ ಬಳ್ಳಾರಿ, ಗದಗ ಜಿಲ್ಲೆಯ ಸರ್ಕಾರಿ ನೌಕರರ ಬಳಗದಲ್ಲಿ ವಿಶ್ವಾಸಾರ್ಹ ನಾಯಕನಾಗಿ ಗುರುತಿಸಿಕೊಂಡಿದ್ದಾರೆ. ಅವರ 49ನೇ ಜನ್ಮದಿನ ಮತ್ತಷ್ಟು ಜನಪರ ಸೇವೆಗಳಿಗೆ ಪ್ರೇರಣೆಯಾಗಲಿ ಎಂಬುದು ಸಹೋದ್ಯೋಗಿಗಳು, ಸ್ನೇಹಿತರು ಹಾಗೂ ಅಭಿಮಾನಿಗಳ ಹಾರೈಕೆಯಾಗಿದೆ.

**- ಮೈಲಾರಪ್ಪ ಡಿ.ಎಚ್.** ಅಧ್ಯಕ್ಷರು, ಅಮ್ಮ ಫೌಂಡೇಶನ್, ಗದಗ

## ನೌಕರರ ಪರ ಹೋರಾಟಕ್ಕೆ ಮುಂಚೂಣಿ

ನೌಕರರ ಸಮಸ್ಯೆಗಳಿಗೆ ಸ್ಪಂದಿಸುವ ನಾಯಕನಾಗಿ ಗುರುತಿಸಿಕೊಂಡಿರುವ ಬಸವರಾಜ ಬಳ್ಳಾರಿ, ಗದಗ ಜಿಲ್ಲಾ ಸರ್ಕಾರಿ ನೌಕರರ ಸಂಘದ ಜಿಲ್ಲಾಧ್ಯಕ್ಷರಾಗಿ ಸಂಘಟನೆಯನ್ನು ಇನ್ನಷ್ಟು ಬಲಿಷ್ಠಗೊಳಿಸಿದ್ದಾರೆ. ಜಿಲ್ಲಾ ಮಟ್ಟದ ಕ್ರೀಡಾಕೂಟ, ಸಾಂಸ್ಕೃತಿಕ ಕಾರ್ಯಕ್ರಮಗಳು, ನೌಕರರ ಸಮ್ಮೇಳನ, ಕುಂದುಕೊರತೆ ಪರಿಹಾರ ಸಭೆಗಳು ಸೇರಿದಂತೆ ಹಲವು ಕಾರ್ಯಕ್ರಮಗಳನ್ನು ಯಶಸ್ವಿಯಾಗಿ ಆಯೋಜಿಸುವ ಮೂಲಕ ಸಂಘಟನೆಯ ಗೌರವವನ್ನು ಹೆಚ್ಚಿಸಿದ್ದಾರೆ. ಅವರ ಸಂಘಟನಾ ಕೌಶಲ್ಯವನ್ನು ಗುರುತಿಸಿದ ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ಅಧ್ಯಕ್ಷ ಸಿ.ಎಸ್. ಷಡಾಕ್ಷರಿ ನೇತೃತ್ವದ ರಾಜ್ಯ ಸಂಘವು ಡಾ. ಬಸವರಾಜ ಬಳ್ಳಾರಿಯವರನ್ನು ರಾಜ್ಯ ಉಪಾಧ್ಯಕ್ಷರನ್ನಾಗಿ ನೇಮಕ ಮಾಡಿದೆ. ಈ ಮೂಲಕ ಗದಗ ಜಿಲ್ಲೆಯ ನಾಯಕತ್ವ ರಾಜ್ಯ ಮಟ್ಟದಲ್ಲೂ ತನ್ನ ಛಾಪು ಮೂಡಿಸಿದೆ.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka
Printed at : Sai Printing Press, Near Joda Maruti Temple, Gadag-582101, Dist : Gadag- Karnataka